# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 55 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಚಿತ್ರದುರ್ಗ | ದಿನಾಂಕ: 11–09–2024 ಬುಧವಾರ | ಪುಟ: 4 | ಬೆಲೆ : ರೂ.2–00
Volume - 02 Issue - 55 | RNI No: KARKAN/2023/88462 | Chitradurga | Date: 11-09-2024 Wednesday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಸೆ.14 ರಿಂದ ಸ್ವಚ್ಛತಾ ಹೀ ಸೇವಾ ಪಾಕ್ಷಿಕ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿ 2

ಚಳ್ಳಕೆರೆ: ಮಾನವ ಸರಪಳಿ ಕಾರ್ಯಕ್ರಮ ಯಶಸ್ವಿ ಎಲ್ಲರ ಜವಾಬ್ದಾರಿ 3

ಪೋಕ್ಸೋ ತಡೆ, ಬಾಲ್ಯ ವಿವಾಹ ನಿಷೇಧ ಅನುಷ್ಠಾನದಲ್ಲಿ ಶಿಕ್ಷಕರ ಜವಾಬ್ದಾರಿ ಹೆಚ್ಚಿದೆ 4



ಸುದ್ದಿ, ಜಾಹಿರಾತಿಗೆ 9686622252


# 3,341 ಕೋಟಿ ವೆಚ್ಚದಲ್ಲಿ ಚಿಕ್ಕಜಾಜೂರು–ಚಿತ್ರದುರ್ಗ–ಚಳ್ಳಕೆರೆ–ಬಳ್ಳಾರಿ ರೈಲ್ವೆ ಡಬ್ಲಿಂಗ್ ಯೋಜನೆಗೆ ಪ್ರಸ್ತಾವನೆ

» **ಚಿತ್ರದುರ್ಗ**

ರೂ. 3,341 ಕೋಟಿ ವೆಚ್ಚದಲ್ಲಿ ಚಿಕ್ಕಜಾಜೂರು–ಚಿತ್ರದುರ್ಗ–ಚಳ್ಳಕೆರೆ–ಬಳ್ಳಾರಿವರೆಗಿನ 185 ಕಿ.ಮೀಟರ್ ಉದ್ದದ ರೈಲ್ವೆ ಮಾರ್ಗವನ್ನು ದ್ವಿಪಥ ರೈಲ್ವೆ ಮಾರ್ಗವನ್ನಾಗಿ (ಡಬ್ಲಿಂಗ್) ನಿರ್ಮಾಣ ಮಾಡಲು ರೈಲ್ವೆ ಮಂಡಳಿಗೆ ಸಲ್ಲಿಸಿರುವ ಪ್ರಸ್ತಾವನೆಗೆ ರೈಲ್ವೆ ಸಚಿವರಿಂದ ಅನುಮೋದನೆ ಕೊಡಿಸಲಾಗುವುದು ಎಂದು ಸಂಸದ ಗೋವಿಂದ ಕಾರಜೋಳ ತಿಳಿಸಿದ್ದಾರೆ.



ಬೆಂಗಳೂರಿನ ನೈರುತ್ಯ ರೈಲ್ವೆ ವಲಯದ ಮುಖ್ಯ ಆಡಳಿತಾಧಿಕಾರಿ ಹಾಗೂ ಇತರೆ ರೈಲ್ವೆ ಅಧಿಕಾರಿಗಳೊಂದಿಗೆ ಸಂಸದ ಗೋವಿಂದ ಕಾರಜೋಳರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಸಂಸದರು ಅಧಿಕಾರಿಗಳಿಗೆ ತಿಳಿಸಿ ಸದರಿ ಮಾರ್ಗದಲ್ಲಿ 174 ಹೆಕ್ಟೇರ್ ಭೂಸ್ವಾಧೀನದ ಅವಶ್ಯಕತೆಯಿದ್ದು, ಚಿತ್ರದುರ್ಗ ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಚಿತ್ರದುರ್ಗ ತಾಲ್ಲೂಕು, ಅಮೃತಾಪುರ ರೈಲ್ವೆ ನಿಲ್ದಾಣ ಹೊಸ ರೈಲ್ವೆ ನಿಲ್ದಾಣವಾಗಿ ನಿರ್ಮಾಣವಾಗಲಿದೆ. ಈ ಮಾರ್ಗದಲ್ಲಿ 29 ಪ್ರಮುಖ ಸೇತುವೆಗಳು 230 ಸಣ್ಣ ಸೇತುವೆಗಳು 12 ಲೆವೆಲ್ ಕ್ರಾಸಿಂಗ್‌ಗಳು ನಿರ್ಮಾಣ ವಾಗಲಿವೆ. ಈ ಯೋಜನೆಯನ್ನು 4 ವರ್ಷಗಳಲ್ಲಿ ಪೂರ್ಣಗೊಳಿಸುವ ಉದ್ದೇಶವನ್ನು ರೈಲ್ವೆ ಇಲಾಖೆ ಹೊಂದಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು.

ದಾವಣಗೆರೆ–ಚಿತ್ರದುರ್ಗ–ತುಮಕೂರು ಹೊಸ ರೈಲು ಮಾರ್ಗದಲ್ಲಿ ಭರಮಸಾಗರದಿಂದ ಚಿತ್ರದುರ್ಗದವರೆಗಿನ 29 ಕಿ.ಮೀಟರ್ ರೈಲ್ವೆ ಮಾರ್ಗ ನಿರ್ಮಾಣಕ್ಕಾಗಿ ಈಗಾಗಲೇ ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿದ್ದು, ಶೀಘ್ರ ಕಾಮಗಾರಿಯನ್ನ ಪ್ರಾರಂಭಿಸಲಾಗುವುದು ಎಂದು ಮುಖ್ಯ ಆಡಳಿತಾಧಿಕಾರಿ ಅಜಯ್ ಶರ್ಮ ಸಂಸದರಿಗೆ ಮಾಹಿತಿ ನೀಡಿದರು.

ಈ ಮಾರ್ಗದಲ್ಲಿ ಭೂಸ್ವಾಧಿನ ಪಡಿಸಿಕೊಂಡಿರುವ ಜಾಗದಲ್ಲಿ ಅಡಿಕೆ ಹಾಗೂ ಮೆಕ್ಕೆಜೋಳದ ಬೆಳೆಗಳು ಕಟಾವಿಗೆ ಬಂದಿದ್ದು, ಆ ಬೆಳೆಗಳನ್ನು ರೈತರು ತೆಗೆದುಕೊಂಡ ಮೇಲೆ, ಅಂತಹ ಕಡೆ ಕಾಮಗಾರಿಯನ್ನ ಪ್ರಾರಂಭಿಸುವಂತೆ ಸಂಸದರು ಅಧಿಕಾರಿಗಳಿಗೆ ಸೂಚಿಸಿದರು. ಈ ಭಾಗದಲ್ಲಿ ಇನ್ನೂ ಶೇ. 10% ರಷ್ಟು ಭೂಸ್ವಾಧಿನವಾಗಬೇಕಾಗಿದ್ದು, ತ್ವರಿತಗತಿಯಲ್ಲಿ ಭೂಮಿಯನ್ನು ಪಡೆಯುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಚಿತ್ರದುರ್ಗದಿಂದ ಹಿರಿಯೂರುವರೆಗಿನ 45 ಕಿ.ಮೀಟರ್ ಉದ್ದದ ಮಾರ್ಗದಲ್ಲಿ ಶೇ. 78ರಷ್ಟು ಭೂಸ್ವಾಧೀನವಾಗಿದ್ದು, ಶೇ. 90% ರಷ್ಟು ಭೂಸ್ವಾಧೀನವಾದ ನಂತರ ಟೆಂಡರ್ ಕರೆಯಲಾಗುವುದು ಎಂದು ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿ ಪಾವಗಡ–ಮಡಕಶಿರಾ 22 ಕಿ.ಮೀಟರ್ ಉದ್ದದ ಹೊಸ ರೈಲು ಮಾರ್ಗಕ್ಕಾಗಿ ಟೆಂಡರ್ ಕರೆಯಲಾಗಿದ್ದು, ಇದೇ ತಿಂಗಳ 11 ರಂದು ಟೆಂಡರ್ ಪ್ರಕ್ರಿಯೆ ಪೂರ್ಣಗೊಳ್ಳಲಿದೆ ಎಂದು ಅಧಿಕಾರಿಗಳು ತಿಳಿಸಿದರು.

ಚಿತ್ರದುರ್ಗ ನಗರದ ಗೋನೂರು, ಹಿರೇಗುಂಟನೂರು, ಸಿದ್ದಾಪುರ, ಬೆಟ್ಟದ ನಾಗೇನಹಳ್ಳಿ, ಕುರುಬರಹಳ್ಳಿ ಹಾಗೂ ಚಳ್ಳಕೆರೆ ತಾಲ್ಲೂಕಿನ ನಗರಂಗೆರೆ ಮತ್ತು ಸೋಮಗುದ್ದು ಬಳಿ ನಿರ್ಮಾಣವಾಗಿರುವ ಕೆಳಸೇತುವೆಗಳು ಅವೈಜ್ಞಾನಿಕವಾಗಿದ್ದು, ಮಳೆಗಾಲದಲ್ಲಿ ಸೇತುವೆ ಕೆಳಗೆ ನೀರು ತುಂಬಿ ವಾಹನಗಳು ಸಂಚರಿಸುವುದೇ ದುಸ್ಥರವಾಗಿದೆ. ಇವುಗಳನ್ನು ಶೀಘ್ರವೇ ಸರಿಪಡಿಸುವಂತೆ ಅಧಿಕಾರಿಗಳಿಗೆ ತಾಕೀತು ಮಾಡಿದರು. ಚಿತ್ರದುರ್ಗ ನಗರದಲ್ಲಿ ಅಮೃತ್ ಭಾರತ್ ಸ್ಟೇಷನ್ ಯೋಜನೆಯಡಿ ನಿರ್ಮಾಣವಾಗುತ್ತಿರುವ ಹೊಸ ರೈಲ್ವೆ ನಿಲ್ದಾಣಕ್ಕೆ ಫೆಬ್ರವರಿ ತಿಂಗಳಲ್ಲಿ ಶಂಕುಸ್ಥಾಪನೆಯಾಗಿದ್ದರೂ ಕೂಡ ಕಾಮಗಾರಿ ಆಮೆಗತಿಯಲ್ಲಿ ಸಾಗುತ್ತಿದೆ. ಇದಕ್ಕೆ ಕಾರಣವೇನೆಂದು ಸಂಸದರು ಪ್ರಶ್ನಿಸಿದರು. ಇದಕ್ಕೆ ಉತ್ತರಿಸಿದ ಅಧಿಕಾರಿಗಳು ಕೆಲವು ತಾಂತ್ರಿಕ ಅಡಚಣೆಗಳಿಂದ ಕಾಮಗಾರಿ ವಿಳಂಬವಾಗಿದ್ದು, ಮೇ 2025ಕ್ಕೆ ಕಾಮಗಾರಿಯನ್ನು ಪೂರ್ಣಗೊಳಿಸುವುದಾಗಿ ಭರವಸೆ ನೀಡಿದರು. ಚಿತ್ರದುರ್ಗ ನಗರದ ರೈಲ್ವೆ ನಿಲ್ದಾಣಕ್ಕೆ ಪ್ರವೇಶ ಕಲ್ಪಿಸುವ ಸುಮಾರು 300 ಮೀಟರ್ ಉದ್ದದ ರಸ್ತೆಯನ್ನ ಸಿಮೆಂಟ್ ಕಾಂಕ್ರೀಟ್ ರಸ್ತೆಯನ್ನಾಗಿ ಮಾಡಲು ಕ್ರಮಕ್ಕೆಗೊಳ್ಳುವಂತೆ ಸೂಚಿಸಿದರು.

ಚಳ್ಳಕೆರೆಯಲ್ಲಿ ಈ ಮೊದಲು ಕಾರ್ಯನಿರ್ವಹಿಸುತ್ತಿದ್ದ ರಿಸರ್ವೇಷನ್ ಕೌಂಟರನ್ನು ಯಾವ ಕಾರಣದಿಂದ ಮುಚ್ಚಲಾಗಿದೆ ಎಂದು ಸಂಸದರು ಪ್ರಶ್ನಿಸಿದರು. ಪ್ರಯಾಣಿಕರಿಗೆ ಸಾಕಷ್ಟು ಅನಾನುಕೂಲಉಂಟಾಗುತ್ತಿದ್ದು, ಶೀಘ್ರವಾಗಿ ರಿಸರ್ವೇಷನ್ ಕೌಂಟರ್ ತೆರೆಯುವಂತೆ ಸೂಚಿಸಿ ಪ್ರಯಾಣಿಕರ ಅನುಕೂಲಕ್ಕಾಗಿ ಹೊಳಲ್ಕೆರೆ, ರಾಮಗಿರಿ, ಚಳ್ಳಕೆರೆ ಹಾಗೂ ಮೊಳಕಾಲ್ಮೂರು ಮತ್ತು ಅಮೃತಾಪುರ ರೈಲ್ವೆ ನಿಲ್ದಾಣಗಳಲ್ಲಿ ಪ್ರಮುಖ ರೈಲುಗಳಿಗೆ ನಿಲುಗಡೆ ಒದಗಿಸುವಂತೆ ಅಧಿಕಾರಿಗಳಿಗೆ ತಿಳಿಸಿದರು. ಈ ಬಗ್ಗೆ ಸರ್ವೆ ಕಾರ್ಯ ನಡೆಸಿ, ಕೂಲಂಕುಷವಾಗಿ ಪರಿಶೀಲಿಸಿ ಅಗತ್ಯ ಕ್ರಮಕೈಗೊಳ್ಳಲಾಗುವುದು ಎಂದು ಅಧಿಕಾರಿಗಳು ತಿಳಿಸಿದರು.

ಗುಂತಕಲ್ಲು – ಚಿಕ್ಕಜಾಜೂರುವರೆಗೆ ಸಂಚರಿಸುವ ರೈಲನ್ನು ಹುಬ್ಬಳ್ಳಿಯವರೆಗೆ ಹಾಗೂ ಹುಬ್ಬಳ್ಳಿಯಿಂದ ಚಿಕ್ಕಜಾಜೂರುವರೆಗೆ ಸಂಚರಿಸುವ ರೈಲನ್ನು ಚಿತ್ರದುರ್ಗದವರೆಗೆ ವಿಸ್ತರಿಸಲು ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಲಾಯಿತು. ಈಗಾಗಲೇ ರೈಲ್ವೆ ಇಲಾಖೆ ಮೋದೀಜಿಯವರನೇತೃತ್ವದಲ್ಲಿಪ್ರಯಾಣಿಕ ಸ್ನೇಹಿಯಾಗಿ ಕಾರ್ಯನಿರ್ವಹಿಸುತ್ತಿದ್ದು, ಇದನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಪ್ರಯಾಣಿಕರ ಬಳಿ ತೆಗೆದುಕೊಂಡು ಹೋಗುವುದು ಅಧಿಕಾರಿಗಳಾದ ತಮ್ಮೆಲ್ಲರ ಕರ್ತವ್ಯವಾಗಿದೆ. ಈ ನಿಟ್ಟಿನಲ್ಲಿ ಹೆಚ್ಚು ಕಾಳಜಿವಹಿಸಿ, ಪ್ರಯಾಣಿಕರಿಗೆ ಅನುಕೂಲವಾಗುವಂತೆ ಕೆಲಸಗಳನ್ನ ಅತ್ಯಂತ ಕಾಳಜಿಯಿಂದ ನಿರ್ವಹಿಸಿ ಎಂದು ಇದೇ ಸಂದರ್ಭದಲ್ಲಿ ಅಧಿಕಾರಿಗಳಿಗೆ ಕಿವಿಮಾತು ಹೇಳಿದರು. ಸಭೆಯಲ್ಲಿ ನೈರುತ್ಯ ರೈಲ್ವೆ ವಲಯದ ಮುಖ್ಯ ಆಡಳಿತಾಧಿಕಾರಿ (ಕಟ್ಟಡ) ಅಜಯ್ ಶರ್ಮ ಮೈಸೂರು ವಿಭಾಗದ ಸಹಾಯಕ ರೈಲ್ವೆ ವಿಭಾಗೀಯ ಅಧಿಕಾರಿ ಶ್ರೀಮತಿ ವಿಜಯ, ಮುಖ್ಯ ಇಂಜಿನಿಯರ್ (ಕಟ್ಟಡ) ಪರದೀಪ್ ಪುರಿ, ಮುಖ್ಯ ಇಂಜಿನಿಯರ್ (ಸರ್ವೆ) ವೆಂಕಟೇಶ್ವರಲು, ಮುಖ್ಯ ಇಂಜಿನಿಯರ್ ರೋಹನ್ ಡೋಂಗ್ರೆ, ಡೆಪ್ಯುಟೀ ಚೀಫ್ ಇಂಜಿನಿಯರ್ ರಜತ್ ಸೇರಿದಂತೆ ಹಲವು ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

---


**ವಾಯು ವಿಹಾರಕ್ಕೆ ಮತ್ತು ಶ್ರೀ ಮಠಕ್ಕೆ ಬಂದು ಹೋಗುತ್ತಿದ್ದ ಭಕ್ತರಲ್ಲಿ ತೀವ್ರ ಆತಂಕವನ್ನ ಉಂಟುಮಾಡಿದ ಕರಡಿ**

# ಶ್ರೀ ಮಠ ಪ್ರವೇಶಿಸಲು ಯತ್ನಿಸಿದ ಜಾಂಬುವಂತ

» **ಹೊಸದುರ್ಗ**

ಪಟ್ಟಣದ ಗುಡ್ಡದ ತಪ್ಪಲಿನಲ್ಲಿರುವ ಕುಂಚಿಟಿಗ ಮಹಾ ಸಂಸ್ಥಾನ ಮಠದ ಒಳಗೆ ಮಂಗಳವಾರ ಸಂಜೆ ಸುಮಾರು 6 ಗಂಟೆಯ ಸಮಯದಲ್ಲಿ ಜಾಂಬುವಂತ ನಿರ್ಭಯವಾಗಿ ಶ್ರೀ ಮಠದ ಒಳಗೆ ಪ್ರವೇಶಿಸಲು ಯತ್ನಿಸಿರುವ ಘಟನೆ ಜರುಗಿದೆ.

ಸಂಜೆ ಸುಮಾರು 5.45 ರಿಂದ ಶ್ರೀ ಮಠದ ಎದುರಿಗಿರುವ ಬೈಪಾಸ್ ರಸ್ತೆಯಲ್ಲಿ ತಿರುಗಾಡಿ



ಇಲ್ಲಿನ ವಾಯು ವಿಹಾರಕ್ಕೆ ಮತ್ತು ಶ್ರೀ ಮಠಕ್ಕೆ ಬಂದು ಹೋಗುತ್ತಿದ್ದ ಭಕ್ತರಲ್ಲಿ ತೀವ್ರ ಆತಂಕವನ್ನ ಉಂಟುಮಾಡಿದ್ದು ವಾಯು ವಿಹಾರಕ್ಕೆ ಬಂದಿದ್ದವರು ಮತ್ತು ಶ್ರೀ ಮಠಕ್ಕೆ ಬಂದಿದ್ದವರು ಕರಡಿಯನ್ನ ನೋಡಿ ಶ್ರೀ ಮಠದ ಒಳಗೆ ಓಡಿ ಹೋಗಿದ್ದಾರೆ.

ಪುಟ 2

# ಬೊಮ್ಮಸಮುದ್ರ : ಹಾಡುಹಗಲೇ ಜೂಜಾಟ : 2200 ಹಣವಶ

**ಚಳ್ಳಕೆರೆ:** ತಾಲ್ಲೂಕಿನ ಬೊಮ್ಮಸಮುದ್ರ ಗ್ರಾಮದ ಕೆರೆಯ ಪಕ್ಕದ ಸಾರ್ವಜನಿಕ ರಸ್ತೆಯಲ್ಲಿ ಹಾಡುಹಗಲೇ ಇಸ್ಪೀಟ್ ಜೂಜಾಟದಲ್ಲಿ ತೊಡಗಿದ್ದ ಮಂಜುನಾಥ(36), ಕೃಷ್ಣಮೂರ್ತಿ(38), ವೆಂಕಟೇಶ್(48) ಇವರುಗಳು ಜೂಜಾಟದಲ್ಲಿ ನಿರತರಾಗಿದ್ದು, ಜೂಜಾಟದ ಹಣ 2200 ವಶಪಡಿಸಿಕೊಳ್ಳಲಾಗಿದೆ. ಚಿತ ಮಾಹಿತಿ ಮೇರೆಗೆ ಹಿರಿಯ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಮುಖ್ಯಪೇದೆ ಎಚ್.ಮಂಜಪ್ಪ, ಪೇದೆ ಶ್ರೀಧರವಸಂತಧರಣೇನವರ್ ಸ್ಥಳಕ್ಕೆ ಭೇಟಿ ನೀಡಿ ಜೂಜಾಟದ ಹಣ ಹಾಗೂ ಇತರೆ ವಸ್ತುಗಳನ್ನು ವಶಕ್ಕೆ ಪಡೆದು ಪ್ರಕರಣ ದಾಖಲಿಸಿದ್ದಾರೆ.


---

**ಪ್ರಮುಖ ಸುದ್ದಿ**

# ಹಿರಿಯ ಪತ್ರಕರ್ತ ವಸಂತ್ ನಾಡಿಗೇರ್‌ಗೆ ನುಡಿನಮನ

» **ಚಿತ್ರದುರ್ಗ**

ತಮ್ಮ ವಿಶಿಷ್ಟ ಮಾತಿನ ಶೈಲಿ ಹಾಗೂ ಪನ್ ಹೆಡ್ಡಿಂಗ್‌ಗಳ ಮೂಲಕವೇ ಕನ್ನಡ ಪತ್ರಿಕೋದ್ಯಮದಲ್ಲಿ ಖ್ಯಾತಿ ಪಡೆದಿರುವ ವಸಂತ ನಾಡಿಗೇರ ಸರಳ ಸಜ್ಜನಿಕೆಯವರಾಗಿದ್ದರು ಎಂದು ಸಾರ್ವಜನಿಕ ಸಂಪರ್ಕ ಇಲಾಖೆಯ ಅಧಿಕಾರಿಗಳಾದ ತುಕರಾಂ ಬಣ್ಣಿಸಿದರು




ಜಿಲ್ಲಾ ಕಾರ್ಯನಿತರ ಪತ್ರಕರ್ತರ ಸಂಘದ ಆಶ್ರಯದಲ್ಲಿ ಮಂಗಳವಾರ ಪತ್ರಕರ್ತರ ಭವನದಲ್ಲಿ ಇತ್ತಿಚೆಗೆ ನಿಧನರಾದ ವಸಂತ್ ನಾಡಿಗೇರರವರ ಸ್ಮರಣಾರ್ಥ ಹಮ್ಮಿಕೊಂಡಿದ್ದ ನುಡಿನಮನ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಪತ್ರಿಕೆಯಲ್ಲಿ ಅವರು ಶೀರ್ಷಿಕೆಗಳನ್ನು ಕೂಡುವುದರಲ್ಲಿ ಹಲವು ವಿನೂತನ ಪ್ರಯೋಗಗಳನ್ನು ಮಾಡುವುದರ ಮೂಲಕ ಕನ್ನಡ ಪತ್ರಿಕೋದ್ಯಮದಲ್ಲಿಹೊಸಆಯಾಮವನ್ನು ನೀಡಿದ್ದರು. ತಾವು ಕೆಲಸ ಮಾಡಿದ ವಿವಿಧ ಪತ್ರಿಕೆಗಳಲ್ಲಿ ಉತ್ತಮವಾದ ಶೀರ್ಷಿಕೆಗಳನ್ನು ನೀಡುವುದರ ಮೂಲಕ ಹೆಸರನ್ನು ಪಡೆದಿದ್ದರು. ಭಾಷೆಯ ಮೇಲೆ ಹಿಡಿತವನ್ನು ಸಾಧಿಸಿದವರು ಮಾತ್ರ ಉತ್ತಮವಾದ ತಲೆ ಬಹರವನ್ನು ನೀಡಲು ಸಾಧ್ಯವಿದೆ ಇಂತಹ ವ್ಯಕಿತ್ವವನ್ನು ಹೊಂದಿದವರು ವಸಂತರವರು, ಇದ್ದಲ್ಲದೆ ಸಾಮಾಜಿಕ ಕಳಕಳಿಯನ್ನು ಇಟ್ಟುಕೊಳ್ಳುವುದರ ಮೂಲಕ ಅದನ್ನು ತಮ್ಮ ವೃತ್ತಿಯಲ್ಲಿ ಪಾಲಿಸುತ್ತಿದ್ದರು. ಇಂದಿನ ಯುವ ಪತ್ರಕರ್ತರಿಗೆ ಅವರು ಮಾರ್ಗದರ್ಶಕರಾಗಿದ್ದರು ಎಂದರು.

ಹಿರಿಯ ಪತ್ರಕರ್ತರು, ಸಂಯುಕ್ತ ಕರ್ನಾಟಕದ ವರದಿಗಾರರಾದ ಬಸವರಾಜು ಮಾತನಾಡಿ, ನನಗೆ ಅವರ ಒಡನಾಟ ಅಷ್ಟಾಗಿ ಇರಲಿಲ್ಲ ದರ್ಶನರವರ ಪ್ರಕರಣದಲ್ಲಿ ಆರೋಪಿಗಳಾದ ಚಿತ್ರದುರ್ಗದ ರವರ ಬಗ್ಗೆ ಅವರ ಮನೆಯ ವಾತಾವರಣದ ಬಗ್ಗೆ ಸುದ್ದಿಯನ್ನು ಮಾಡುವಂತೆ ನಮಗೆ ತಿಳಿಸಿದ್ದರು ಇದರ ಬಗ್ಗೆ ನಾನು ಸಹಾ ಸುದ್ದಿಯನ್ನು ತಯಾರು ಮಾಡಿ ಕಳುಹಿಸಿದ್ದೆ ಆದರೆ ಅದನ್ನು ಸರಿಯಾದ ರೀತಿಯಲ್ಲಿ ತಯಾರು ಮಾಡಿ ಪತ್ರಿಕೆಯಲ್ಲಿ ಪ್ರಕಟ ಮಾಡಿದ್ದು ಇದರ ಪೂರ್ಣವಾದ ಹೆಸರು ಅವರಿಗೆ ಸಲ್ಲುತ್ತದೆ ಎಂದು ತಿಳಿಸಿ, ನನಗೆ ಮಾರ್ಗದರ್ಶಕರಾಗಿ ಉತ್ತಮವಾದ ಸಲಹೆಯನ್ನು ನೀಡುವುದರ ಮೂಲಕ ದಾರಿ ದೀಪವಾಗಿದ್ದಾರೆ ಎಂದು ತಿಳಿಸಿದರು.

ಹಿರಿಯ ಪತ್ರಕರ್ತರು, ಕನ್ನಡಪ್ರಭ ವರದಿಗಾರರಾದ ಚಿಕ್ಕಪ್ಪನಹಳ್ಳಿ ಷಣ್ಮುಖ ಮಾತನಾಡಿ, 1995ರಲ್ಲಿ ನಾನು ಪತ್ರಕರ್ತನಾಗಿದ್ದಾಗ ಅವರು ನನಗೆ ಸಹಾಯವನ್ನು ಮಾಡಿದ್ದಾರೆ ಇದ್ದಲ್ಲದೆ ಕನ್ನಡಪ್ರಭ, ವಿಜಯ ಕರ್ನಾಟಕದಲ್ಲಿ ಕೆಲಸವನ್ನು ಮಾಡುವುದರ ಮೂಲಕ ಉತ್ತಮವಾದ ತಲೆ ಬಹರವನ್ನು ನೀಡುವುದರ ಮೂಲಕ ಹೆಸರನ್ನು ಪಡೆದಿದ್ದಾರೆ. ಇವರಲ್ಲಿ ಕಲಿಯುವವರಿಗೆ ಹೆಚ್ಚಿನ ರೀತಿಯ ಪ್ರೋತ್ಸಾಹವನ್ನು ನೀಡುತ್ತಿದ್ದರು, ಈಗ ಅವರಿಗೆ 59 ವರ್ಷ ಸಾಯುವಂತ ವಯಸ್ಸಲ್ಲ, ಅದರೂ ಸಹಾ ಭಗವಂತ ಅವರನ್ನು ಕರೆದುಕೊಂಡಿದ್ದಾನೆ, ಅವರು ಇನ್ನೂ ಬದುಕಿದ್ದರೆ ಹಲವಾರು ಜನರಿಗೆ ನರವಾಗುತ್ತಿದ್ದರು ಎಂದರು.

ಹಿರಿಯ ಪತ್ರಕರ್ತರು ವಿಜಯ ಕರ್ನಾಟಕದ ವರದಿಗಾರರಾದ ಅಹೋಬಲಪತಿ ಮಾತನಾಡಿ, ನಾನು ವಿಜಯ ಕರ್ನಾಟಕದಲ್ಲಿ ಕೆಲಸವನ್ನು ಮಾಡಲು ಒಂದು ರೀತಿಯಲ್ಲಿ ವಸಂತರವರು ನೆರವಾಗಿದ್ದಾರೆ, ನನ್ನ ಹಲವಾರು ಬರಹಗಳನ್ನು ಮೆಚ್ಚಿ ದೂರವಾಣಿಯನ್ನು ಮಾಡಿ ನನಗೆ ಶುಭವನ್ನು ಕೋರಿದ್ದರು. ಸುದ್ದಿ ವಿಷಯದಲ್ಲಿ ಉತ್ತಮವಾದ ಕೆಲಸವನ್ನು ಮಾಡಿದ್ದಾರೆ. ಪತ್ರಿಕೋದ್ಯಮದಲ್ಲಿ ಬೆಳೆಯುವವರಿಗೆ ಉತ್ತಮ ರೀತಿಯಲ್ಲಿ ಮಾರ್ಗದರ್ಶಕರಾಗಿದ್ದರು. ವಸಂತರವರ ನಿಧನವನ್ನು ಹಲವಾರು ಮಾಧ್ಯಮಗಳು ಸ್ಮರಣೆಯನ್ನು ಮಾಡಿದ್ದಾರೆ. ಇನ್ನೂ ಮುಂದೆ ಇಂತಹ ಪತ್ರಕರ್ತರ ಸಂಖ್ಯೆ ಕಡಿಮೆಯಾಗುವ ನೀರಿಕ್ಷೆ ಇದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷರಾದ ದಿನೇಶ್ ಗೌಡಗೆರೆ ಮಾತನಾಡಿ, ವಸಂತರವರು ಮರಾಠಿ ಮತ್ತು ಕನ್ನಡ ಭಾಷೆಯಲ್ಲಿ ಉತ್ತಮವಾದ ಹಿಡಿತವನ್ನು ಸಾಧಿಸಿದ್ದರು, ಯುವ ಪತ್ರಕರ್ತರಿಗೆ ದಾರಿ ದೀಪವಾಗಿದ್ದರು, ಅವರನ್ನು ಬೆನ್ನು ತಟ್ಟುವ ಕಾರ್ಯವನ್ನು ಮಾಡಿದ್ದಾರೆ. ಪತ್ರಕರ್ತರು ಯಾವ ರೀತಿ ಇರಬೇಕು ಎನ್ನುವುದನ್ನು ತೋರಿಸಿ ಕೊಟ್ಟಿದ್ದಾರೆ. ಇವರ ಮಾರ್ಗದರ್ಶನ ಬೇರೆ ಪತ್ರಕರ್ತರಿಗೆ ಮಾದರಿಯಾಗಬೇಕಿದೆ ಎಂದರು.

ಕಾರ್ಯಕ್ರಮದಲ್ಲಿ ನಿವೃತ್ತ ಉಪನ್ಯಾಸಕರಾದ ಆಶೋಕ ಸಂಗೇನಹಳ್ಳಿ ಮಾತನಾಡಿದರು. ನಿವೃತ್ತ ಪ್ರಾಂಶುಪಾಲರಾದ ಯಾದವ ರೆಡ್ಡಿ, ನೀರಾವರಿ ಹೋರಾಟ ಸಮಿತಿಯ ದಯಾನಂದ ಹಿರಿಯ ಪತ್ರಕರ್ತರು ಭಾಗವಹಿಸಿದ್ದರು.

---

## ಫಾಸ್ಟ್ ನ್ಯೂಸ್

### ಜಿಲ್ಲಾ ಹಾಪ್‌ಕಾಮ್ಸ್: ಸೆ.12ರಂದು ವಾರ್ಷಿಕ ಮಹಾಸಭೆ

» **ಚಿತ್ರದುರ್ಗ**

ಚಿತ್ರದುರ್ಗ ಜಿಲ್ಲಾ ತೋಟದ ಉತ್ಪನ್ನಗಳ ಬೆಳೆಗಾರರ ಸಹಕಾರ ಮಾರಾಟ ಮತ್ತು ಸಂಸ್ಕರಣ ಸಂಘ (ಜಿಲ್ಲಾ ಹಾಪ್‌ಕಾಮ್ಸ್)ದ 2023–24ನೇ ಸಾಲಿನ ಸಂಘದ 39ನೇ ವಾರ್ಷಿಕ ಮಹಾಸಭೆ ಇದೇ ಸೆ.12ರಂದು ಬೆಳಿಗ್ಗೆ 11ಕ್ಕೆ ಚಿತ್ರದುಗ ನಗರದ ತುರುವನೂರು ರಸ್ತೆಯ ಸಂಘದ ಕಚೇರಿ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ. ಜಿಲ್ಲಾ ಹಾಪ್‌ಕಾಮ್ಸ್ ಅಧ್ಯಕ್ಷ ಕೆ.ಎಂ.ತಿಪ್ಪೇಸ್ವಾಮಿ ಅವರು ಸಭೆಯ ಅಧ್ಯಕ್ಷತೆ ವಹಿಸುವರು ಎಂದು ಜಿಲ್ಲಾ ಹಾಪ್‌ಕಾಮ್ಸ್ ವ್ಯವಸ್ಥಾಪಕ ನಿರ್ದೇಶಕರು ತಿಳಿಸಿದ್ದಾರೆ.

### ಸೆ.13 ರಂದು ಹಿರಿಯ ನಾಗರಿಕರ ಕ್ರೀಡಾ, ಸಾಂಸ್ಕೃತಿಕ ಸ್ಪರ್ಧೆ

» **ಚಿತ್ರದುರ್ಗ**

ಅಕ್ಟೋಬರ್ 01 ರಂದು ಜರಗುವ ವಿಶ್ವ ಹಿರಿಯ ನಾಗರಿಕ ದಿನಾಚರಣೆ ಅಂಗವಾಗಿ ಸೆ.13 ರಂದು ಬೆಳಿಗ್ಗೆ 10ಕ್ಕೆ ಚಿತ್ರದುರ್ಗ ನಗರದ ಒನಕೆ ಓಬವ್ವ ಜಿಲ್ಲಾ ಕ್ರೀಡಾಂಗಣದಲ್ಲಿ 60 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿಗಾಗಿ ಕ್ರೀಡಾ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ.

60 ರಿಂದ 69 ಹಾಗೂ 70 ವರ್ಷ ಮೇಲ್ಪಟ್ಟವರು ಎಂಬ ಎರಡು ಗುಂಪುಗಳಲ್ಲಿ ಸ್ಪರ್ಧೆಗಳು ಜರುಗಲಿವೆ. ಕ್ರೀಡಾ ವಿಭಾಗದಲ್ಲಿ ಮ್ಯೂಜಿಕಲ್ ಚೇರ್, ಬಿರುಸಿನ ನಡಿಗೆ, ಬಕೆಟ್‌ನಲ್ಲಿ ಬಾಲ್ ಎಸೆಯುವ ಸ್ಪರ್ಧೆಗಳಿವೆ. ಸಾಂಸ್ಕೃತಿಕ ವಿಭಾಗದಲ್ಲಿ ಗಾಯನ ಹಾಗೂ ಏಕ ಪಾತ್ರಾಭಿನಯ ಸ್ಪರ್ಧೆಗಳಿವೆ. ಬೆಳಿಗ್ಗೆ 9.30 ರಿಂದಲೇ ಹೆಸರುಗಳನ್ನು ನೊಂದಾಯಿಸಿಕೊಳ್ಳಲಾಗುವುದು. ಹೆಚ್ಚಿನ ಮಾಹಿತಿಗಾಗಿ ಒನಕೆ ಓಬವ್ವ ಜಿಲ್ಲಾ ಕ್ರೀಡಾಂಗಣದ ಬಳಿಯ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಕಚೇರಿಗೆ ಭೇಟಿ ನೀಡಬಹುದು. ದೂರವಾಣಿ ಸಂಖ್ಯೆ 08194–235284ಗೆ ಕರೆ ಮಾಡಬಹುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸೆ.12 ರಂದು ಎನ್.ಜಿ.ಓ ಪದಾಧಿಕಾರಿಗಳ ಸಭೆ

» **ಚಿತ್ರದುರ್ಗ**

ರಾಜ್ಯದ ಉತ್ತರ ತುದಿಯಿಂದ ದಕ್ಷಿಣ ತುದಿಯವರೆಗೆ ಮಾನವ ಸರಪಳಿ ರಚಿಸುವ ಮೂಲಕ ಸೆ.15 ರಂದು ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಆಚರಿಸಲು ಸರ್ಕಾರದ ಮಟ್ಟದಲ್ಲಿ ಸಿದ್ದತೆ ನಡೆಸಲಾಗಿದೆ. ಚಿತ್ರದುರ್ಗ ಜಿಲ್ಲೆಯ ಗಡಿ ಭಾಗವಾದ ಮೊಳಕಾಲ್ಮೂರು ತಾಲ್ಲೂಕಿನ ಮೇಲಿನಕಣಿವೆಯಿಂದ ಚಳ್ಳಕೆರೆ, ಹಿರಿಯೂರು ಮಾರ್ಗವಾಗಿ ಜವಗೊಂಡನಹಳ್ಳಿಯವರೆಗೆ ಸುಮಾರು 140 ಕಿ.ಮೀ.ಉದ್ದದ ಮಾನವ ಸರಪಳಿಯನ್ನು ಜಿಲ್ಲೆಯಲ್ಲಿ ರಚಿಸಲಾಗುತ್ತಿದೆ. ಈ ಹಿನ್ನಲೆಯಲ್ಲಿ ಸೆ.12 ರಂದು ಮಧ್ಯಾಹ್ನ 3 ಗಂಟೆಗೆ ಚಿತ್ರದುರ್ಗ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ, ಸಿದ್ದತಾ ಸಭೆ ಆಯೋಜಿಸಲಾಗಿದೆ. ಸಭೆಗೆ ಜಿಲ್ಲೆಯ ಎಲ್ಲಾ ಸರ್ಕಾರೇತರ ( ಎನ್.ಜಿ.ಓ), ರೈತ, ಮಹಿಳಾ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ ಹಾಗೂ ಅಲ್ಪಸಂಖ್ಯಾತರ ಸಂಘಗಳ ಸಂಸ್ಥೆಗಳ ಪದಾಧಿಕಾರಿಗಳು ಸೇರಿದಂತೆ ವಿವಿಧ ಸಂಘಟನೆಗಳ ಪದಾಧಿಕಾರಿಗಳು ಹಾಜರಾಗಿ ಸೂಕ್ತ ಸಲಹೆ ಸೂಚನೆಗಳನ್ನು ನೀಡುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಮದ್ಯ ಮಾರಾಟ ನಿಷೇಧ

» **ದಾವಣಗೆರೆ**

ಗಣೇಶಮೂರ್ತಿ ಮೆರವಣಿಗೆ ಹಾಗೂ ಸೆ.16 ರಂದು ಆಚರಿಸಲಿರುವ ಈದ್ ಮಿಲಾದ್ ಹಬ್ಬದ ಪ್ರಯುಕ್ತ ಕಾನೂನು ಸುವ್ಯವಸ್ಥೆ, ಸಾರ್ವಜನಿಕ ಶಾಂತಿ ಕಾಪಾಡಲು ಮುಂಜಾಗ್ರತಾ ಕ್ರಮವಾಗಿ ಮದ್ಯ ಮಾರಾಟ ಮತ್ತು ಸರಬರಾಜನ್ನು ನಿಷೇಧಿಸಿ ಜಿಲ್ಲಾ ದಂಡಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ ಆದೇಶಿಸಿದ್ದಾರೆ. ಸೆ.11 ಮತ್ತು 16 ರಂದು ದಾವಣಗೆರೆ ಜಿಲ್ಲೆಯಾದ್ಯಂತ, ಸೆ.15 ರಂದು ಮಹಾನಗರಪಾಲಿಕೆ ವ್ಯಾಪ್ತಿ ಹಾಗೂ ಹರಿಹರ, ಚನ್ನಗಿರಿ, ಹೊನ್ನಾಳಿ ಮತ್ತು ನ್ಯಾಮತಿ ತಾಲ್ಲೂಕುಗಳ ವ್ಯಾಪ್ತಿಯಲ್ಲಿ ಬೆಳಿಗ್ಗೆ 6 ರಿಂದ ಮಧ್ಯರಾತ್ರಿ 12 ಗಂಟೆಯವರೆಗೆ ಮದ್ಯ ಮಾರಾಟ, ಸರಬರಾಜು ನಿಷೇಧಿಸಲಾಗಿದೆ.

## ಫಾಸ್ಟ್ ನ್ಯೂಸ್

### ಶ್ರೀ ಮಠ ಪ್ರವೇಶಿಸಲು ಯತ್ನಿಸಿದ ಜಾಂಬುವಂತ

» ಮೊದಲ ಪುಟದಿಂದ

ಭಕ್ತರು ಓಡಿ ಬರುವುದನ್ನು ನೋಡಿದ ಶ್ರೀ ಶಾಂತವೀರಸ್ವಾಮೀಜಿ ಶ್ರೀ ಮಠದಲ್ಲಿ ಆಶ್ರಯ ನೀಡಿ ಕರಡಿಯನ್ನ ವೀಕ್ಷಿಸುತ್ತಿದ್ದಂತೆ ಕರಡಿ ಶ್ರೀಮಠದ ಆವರಣವನ್ನ ಪ್ರವೇಶ ಮಾಡಲು ಯತ್ನಿಸಿದಾಗ ಶ್ರೀ ಮಠದ ಬಾಗಿಲನ್ನ ಭದ್ರ ಪಡಿಸಿ ಮಹಡಿಯ ಮೇಲೆ ಎಲ್ಲರೂ ನಿಂತುಕೊಂಡು ಜೋರಾಗಿ ಕೇಕೆ ಹಾಕಿದ್ದಾರೆ ನಾಯಿಗಳು ಬೊಗಳಿದ ಶಬ್ದ ಮತ್ತು ಜನರು ಕೇಕೆ ಹಾಕಿದ ಶಬ್ದಕ್ಕೆ ಕರಡಿ 15 ನಿಮಿಷಗಳ ನಂತರ ಗುಡ್ಡದ ಕಡೆ ಕಾಲು ಕಿತ್ತಿದೆ ಎಂದು ವಾಯುವಿಹಾರಕ್ಕೆ ಹೋಗಿದ್ದ ಪ್ರತ್ಯಕ್ಷದರ್ಶಿ ವಿದ್ಯಾ ನಗರ ಬಡಾವಣೆಯ ವಸಂತಕುಮಾರ್ ಪತ್ರಿಕೆಗೆ ತಿಳಿಸಿದ್ದಾರೆ.ಕರಡಿಯನ್ನ ಸೆರೆ ಹಿಡಿಯುವಂತೆ ಅರಣ್ಯ ಇಲಾಖೆಗೆ ದೂರವಾಣಿಯ ಮೂಲಕ ಶ್ರೀ ಶಾಂತವೀರಸ್ವಾಮೀಜಿಯವರು ಕರೆ ಮಾಡಿದ್ದಾರೆ ಎಂದು ತಿಳಿದು ಬಂದಿದ್ದು ಇದೇ ಭಾಗದಲ್ಲಿ ಕಳೆದ ತಿಂಗಳು ಒಂದು ಕರಡಿಯನ್ನ ಸರೆ ಹಿಡಿಯಲಾಗಿತ್ತು.

### ಸೆ.11 ಮತ್ತು 12ರಂದು ಜಿಲ್ಲಾ ಮಟ್ಟದ ಪದವಿ ಪೂರ್ವ ಕಾಲೇಜುಗಳ ಕ್ರೀಡಾ ಕೂಟ

» ಚಿತ್ರದುರ್ಗ

ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಹಾಗೂ ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜು ವತಿಯಿಂದ ಇದೇ ಸೆ.11 ಮತ್ತು 12ರಂದು ಚಿತ್ರದುರ್ಗ ಜಿಲ್ಲಾ ಮಟ್ಟದ ಪದವಿಪೂರ್ವ ಕಾಲೇಜುಗಳ ಕ್ರೀಡಾಕೂಟ ಆಯೋಜಿಸಲಾಗಿದ್ದು, ಸೆ.11ರಂದು ಬೆಳಿಗ್ಗೆ 10ಕ್ಕೆ ನಗರದ ಒನಕೆ ಓಬವ್ವ ಕ್ರೀಡಾಂಗಣದಲ್ಲಿ ಉದ್ಘಾಟನಾ ಸಮಾರಂಭ ಹಮ್ಮಿಕೊಳ್ಳಲಾಗಿದೆ. ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಕಾರ್ಯಕ್ರಮ ಉದ್ಘಾಟಿಸುವರು. ಶಾಸಕ ಕೆ.ಸಿ.ವೀರೇಂದ್ರ (ಪಪ್ಪಿ) ಅಧ್ಯಕ್ಷತೆ ಹಾಗೂ ಧ್ವಜಾರೋಹಣ ನೆರವೇರಿಸುವರು. ಸಂಸದ ಗೋವಿಂದ ಎಂ ಕಾರಜೋಳ ಘನ ಉಪಸ್ಥಿತಿ ವಹಿಸುವರು. ಮುಖ್ಯ ಅತಿಥಿಗಳಾಗಿ ಶಾಸಕರಾದ ಬಿ.ಜಿ.ಗೋವಿಂದಪ್ಪ, ಟಿ.ರಘುಮೂರ್ತಿ, ಎನ್.ವೈ.ಗೋಪಾಲಕೃಷ್ಣ, ಡಾ.ಎಂ.ಚಂದ್ರಪ್ಪ, ವಿಧಾನ ಪರಿಷತ್ ಸದಸ್ಯರಾದ ಡಿ.ಟಿ.ಶ್ರೀನಿವಾಸ್, ಚಿದಾನಂದ ಎಂ ಗೌಡ, ಕೆ.ಎಸ್.ನವೀನ್, ಶಾಲಾ ಶಿಕ್ಷಣ ಇಲಾಖೆ (ಪದವಿಪೂರ್ವ) ಉಪನಿರ್ದೇಶಕ ಆರ್.ಪುಟ್ಟಸ್ವಾಮಿ, ಬಾಲಕರ ಸರ್ಕಾರಿ ಪದವಿಪೂರ್ವ ಕಾಲೇಜು ಅಭಿವೃದ್ಧಿ ಸಮಿತಿ ಸದಸ್ಯರಾದ ಆರ್.ಮಂಜುನಾಥ್, ಎನ್.ನರಸಿಂಹಮೂರ್ತಿ, ಬಿ.ಆರ್.ಶಿವಕುಮಾರ್, ಮಹೇಶ್ ಬಾಬು, ಪ್ರಾಂಶುಪಾಲರ ಸಂಘದ ಅಧ್ಯಕ್ಷ ಎಸ್.ದೇವೇಂದ್ರಪ್ಪ, ಉಪನ್ಯಾಸಕ ಸಂಘದ ಅಧ್ಯಕ್ಷ ಬಿ.ಆರ್.ಮಲ್ಲೇಶ್, ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕಿ ಸುಚೇತಾ ನೆಲವಿಗಿ ಭಾಗವಹಿಸುವರು.

### ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿ: ಅರ್ಜಿ ಆಹ್ವಾನ

» ಚಿತ್ರದುರ್ಗ

2024–25ನೇ ಸಾಲಿನಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿಯನ್ನು ನೀಡಲು ಅರ್ಹ ವ್ಯಕ್ತಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. 2024ರ ಅಕ್ಟೋಬರ್ 17ರಂದು ನಡೆಯುವ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯಂದು ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿಯನ್ನು ರಾಜ್ಯಮಟ್ಟದಲ್ಲಿ ನೀಡಲು ಪರಿಶಿಷ್ಟ ವರ್ಗದ ಜನಾಂಗದವರ ಏಳಿಗೆಗಾಗಿ ಶ್ರಮಿಸಿದ ಅರ್ಹ ವ್ಯಕ್ತಿಗಳು, ಸ್ವಯಂ ಘೋಷಿತ ಅರ್ಜಿ ಮತ್ತು ದಾಖಲೆಗಳನ್ನು ದ್ವಿಪ್ರತಿಯಲ್ಲಿ ಸೆಪ್ಟೆಂಬರ್ 16 ರ ಸಂಜೆಯೊಳಗಾಗಿ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ, ಚಿತ್ರದುರ್ಗ ಅಥವಾ ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ ಚಿತ್ರದುರ್ಗ ಇವರಿಗೆ ಪೂರ್ಣ ಮಾಹಿತಿಯೊಂದಿಗೆ ಅರ್ಜಿ ಸಲ್ಲಿಸುವಂತೆ ಚಿತ್ರದುರ್ಗ ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಕೋರಿದ್ದಾರೆ.

### ವಲಸೆ ಕುರಿಗಾರರಿಗೆ ಗುರುತಿನ ಚೀಟಿ ವಿತರಣೆ : ಅರ್ಜಿ ಆಹ್ವಾನ

» ಚಿತ್ರದುರ್ಗ

ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ವತಿಯಿಂದ ವಲಸೆ ಕುರಿಗಾರರಿಗೆ ಗುರುತಿನ ಚೀಟಿ ವಿತರಿಸುವ ಸಂಬಂಧ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದ್ದು,ಜಿಲ್ಲೆಯಲ್ಲಿನ20ಕ್ಕೂ ಹೆಚ್ಚು ಕುರಿ, ಮೇಕೆಗಳನ್ನು ಹೊಂದಿರುವ ಅರ್ಹ ವಲಸೆ ಕುರಿಗಾರರಿಂದ ಅರ್ಜಿ ಆಹ್ವಾನಿಸಲಾಗಿದೆ. ಕುರಿಗಾಹಿಗಳು ತಮ್ಮ ತಾಲ್ಲೂಕಿನ ಪಶು ಆಸ್ಪತ್ರೆಯ ಮುಖ್ಯ ಪಶುವೈದ್ಯಾಧಿಕಾರಿಗಳಿಂದ ಅರ್ಜಿಗಳನ್ನು ಪಡೆದು, ವಲಸೆ ಕುರಿಗಾರರು ಎಂಬುದಕ್ಕೆ ಸ್ಥಳೀಯ ಗ್ರಾಮ ಲೆಕ್ಕಾಧಿಕಾರಿಗಳಿಂದ ಮಹಜರ್ ಪ್ರಮಾಣ ಪತ್ರ ಲಗತ್ತಿಸಿ ಸೂಕ್ತ ದಾಖಲೆಗಳೊಂದಿಗೆ ಸೆ.30 ರೊಳಗೆ ಭರ್ತಿ ಮಾಡಿದ ಅರ್ಜಿಗಳನ್ನು ತಮ್ಮ ತಾಲ್ಲೂಕಿನ ಪಶು ಆಸ್ಪತ್ರೆಯ ಮುಖ್ಯ ಪಶುವೈದ್ಯಾಧಿಕಾರಿಗಳಿಗೆ ಸಲ್ಲಿಸಲು ತಿಳಿಸಿದೆ. ಹೆಚ್ಚಿನ ಮಾಹಿತಿಗಾಗಿ ಸ್ಥಳೀಯ ಪಶು ಚಿಕಿತ್ಸಾಲಯ, ಪಶು ಆಸ್ಪತ್ರೆಯ ಪಶುವೈದ್ಯಾಧಿಕಾರಿ, ಆಯಾ ತಾಲ್ಲೂಕಿನ ಪಶು ಆಸ್ಪತ್ರೆಯ ಮುಖ್ಯ ಪಶುವೈದ್ಯಾಧಿಕಾರಿ ಅಥವಾ ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಸಹಾಯಕ ನಿರ್ದೇಶಕರನ್ನು ಸಂಪರ್ಕಿಸಬಹುದು.

# ಸೆ.14 ರಿಂದ ಸ್ವಚ್ಛತಾ ಹೀ ಸೇವಾ ಪಾಕ್ಷಿಕ
# ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿ: ಡಿಸಿ

» ಚಿತ್ರದುರ್ಗ

ಸ್ವಚ್ಛತಾ ಹೀ ಸೇವಾ ಪಾಕ್ಷಿಕ ವಿಶೇಷ ಆಂದೋಲನವನ್ನು ಜಿಲ್ಲೆಯಾದ್ಯಂತ ಇದೇ ಸೆ.14 ರಿಂದ ಅಕ್ಟೋಬರ್ 2 ರವರೆಗೆ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

"ಸ್ವಚ್ಛತಾ ಹೀ ಸೇವಾ ಪಾಕ್ಷಿಕ–2024" ಆಂದೋಲನ ಕುರಿತು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇತ್ತೀಚೆಗೆ ಏರ್ಪಡಿಸಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗ್ರಾಮೀಣ ಮತ್ತು ನಗರ ಪ್ರದೇಶದ ಜನರಲ್ಲಿ ಸ್ವಚ್ಛತೆ ಕುರಿತು ಅರಿವು ಮೂಡಿಸುವ ಉದ್ದೇಶದಿಂದ ಇದೇ ಸೆ.14 ರಿಂದ ಅ.2 ರವರೆಗೆ "ಸ್ವಚ್ಛತಾ ಹೀ ಸೇವಾ ಪಾಕ್ಷಿಕ–2024 ಕಾರ್ಯಕ್ರಮವನ್ನು ಸ್ವಭಾವ–ಸ್ವಚ್ಛತೆ, ಸಂಸ್ಕಾರ–ಸ್ವಚ್ಛತೆ ಎಂಬ ಧ್ಯೇಯವಾಕ್ಯದೊಂದಿಗೆ ಹಮ್ಮಿಕೊಳ್ಳಲಾಗುತ್ತಿದೆ ಎಂದರು.

ಸ್ವಚ್ಛತಾ ಆಂದೋಲನದ ಅಂಗವಾಗಿ ಸೆ. 14 ರಂದು ನಗರ, ಸ್ಥಳೀಯ ಸಂಸ್ಥೆಗಳ ಮಟ್ಟದಲ್ಲಿ ಆಂದೋಲನದ ಉದ್ಘಾಟನೆ ಕಾರ್ಯಕ್ರಮ ನೆರವೇರಿಸಬೇಕು, ಕಾರ್ಯಕ್ರಮಕ್ಕೆ ಸಂಸದರು, ಶಾಸಕರುಗಳು ಹಾಗೂ ಸ್ಥಳೀಯ ಜನಪ್ರತಿನಿಧಿಗಳನ್ನು ಶಿಷ್ಟಾಚಾರದಂತೆ ಆಹ್ವಾನಿಸಬೇಕು. ಅಲ್ಲದೆ ಸ್ಥಳೀಯ ಮಟ್ಟದಲ್ಲಿ ವಿವಿಧ ಸಂಘ ಸಂಸ್ಥೆಯವರನ್ನು ತೊಡಗಿಸಿಕೊಳ್ಳಬೇಕು ಎಂದು ಸೂಚನೆ ನೀಡಿದರು.

ಸಾರ್ವಜನಿಕರಿಗೆ ತಮ್ಮ ಸುತ್ತಮುತ್ತಲಿನ ಪ್ರದೇಶಗಳ ಸ್ವಚ್ಛತೆಯ ಮಹತ್ವದ ಕುರಿತು ಜಾಗೃತಿ ಮೂಡಿಸಬೇಕು. ನಗರಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಸಸಿಗಳನ್ನು ನಡೆವುದು ಮತ್ತು ನಗರಗಳ ಸುಂದರೀಕರಣ ಮಾಡಲು ಕ್ರಮ ವಹಿಸಬೇಕು. ಸ್ವಚ್ಛತಾ ಓಟಗಳು, ಸೈಕ್ಲಾಥಾನ್ ಮತ್ತು ಮ್ಯಾರಥಾನ್‌ಗಳ ಮೂಲಕ ಸಮುದಾಯ ಭಾಗವಹಿಸುವಿಕೆಯಮೂಲಕಏಕಕಾಲದಲ್ಲಿ ಫಿಟ್‌ನೆಸ್ ಮತ್ತು ಸ್ವಚ್ಛತೆಯನ್ನು ಉತ್ತೇಜಿಸಲು ಕ್ರಮವಹಿಸಬೇಕು. ಸ್ವಚ್ಛತೆ ಮತ್ತು ನೈರ್ಮಲ್ಯದ ಬದ್ಧತೆ ಪ್ರದರ್ಶಿಸಲು



ಮಾನವ ಸರಪಳಿ ರಚಿಸುವ ಮೂಲಕ ಜಾಗೃತಿ ಮೂಡಿಸಲು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು ಎಂದು ಹೇಳಿದರು.

ತ್ಯಾಜ್ಯ ವಸ್ತುಗಳನ್ನು ಮೂಲದಲ್ಲಿಯೇ ಪ್ರತ್ಯೇಕವಾಗಿ ಬೇರ್ಪಡಿಸಲು, ಗೊಬ್ಬರ ತಯಾರಿಸಲು ಮತ್ತು ಮರು ಬಳಕೆ ತಂತ್ರಗಳ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸುವುದು. ಶಿಕ್ಷಣ ಸಂಸ್ಥೆಗಳಲ್ಲಿ ಕವನ, ಪ್ರಬಂಧ, ಚಿತ್ರಕಲೆ ಮತ್ತು ಪೋಸ್ಟರ್ ಸ್ಪರ್ಧೆಗಳನ್ನು ಏರ್ಪಡಿಸುವುದು ಮತ್ತು ಸ್ವಚ್ಛ ಭಾರತ್ ಮಿಷನ್‌ಗೆ ಸಂಬಂಧಿಸಿದಂತೆ ಸ್ಲೋಗನ್ ಬರವಣಿಗೆ, ರಸಪ್ರಶ್ನೆ ಸ್ಪರ್ಧೆ ಏರ್ಪಡಿಸಿ ಜಾಗೃತಿ ಮೂಡಿಸಬೇಕು. ಸ್ಥಳೀಯ ಸಂಸ್ಥೆಗಳ ಮಟ್ಟದಲ್ಲಿ ಪ್ರಭಾವಿ ವ್ಯಕ್ತಿಗಳು ಮತ್ತು ಜನಪ್ರತಿನಿಧಿಗಳನ್ನು ಒಳಗೊಂಡು ಸ್ವಚ್ಛತೆಯ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು. ಬೀದಿ ಬದಿ ವ್ಯಾಪಾರಸ್ಥರಿಗೆ ಸಭೆ ನಡೆಸಿ ಸ್ವಚ್ಛತೆ ಬಗ್ಗೆ ಅರಿವು ಮೂಡಿಸುವಂತೆ ತಿಳಿಸಿದರು.

ಪ್ರತಿ ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ ಪ್ರದೇಶಗಳಲ್ಲಿ ಸಂಪೂರ್ಣ ಸ್ವಚ್ಛತೆಕಾರ್ಯಕ್ರಮಗಳನ್ನುಆಂದೋಲನದ ರೀತಿಯಲ್ಲಿ ಹಮ್ಮಿಕೊಂಡು, ಸಾರ್ವಜನಿಕ ಸ್ಥಳಗಳು, ವಾಣಿಜ್ಯ, ಮಾರುಕಟ್ಟೆಗಳು, ಪ್ರವಾಸಿ ತಾಣಗಳು, ಅಭಯಾರಣ್ಯ, ಮೃಗಾಲಯಗಳಲ್ಲಿ ಸಾಮೂಹಿಕ ಶುಚಿತ್ವ ಆಂದೋಲನಗಳನ್ನು ಆಯೋಜಿಸುವಂತೆ ತಿಳಿಸಿದರು. ಸ್ವಚ್ಛತಾ ಅಭಿಯಾನದಲ್ಲಿ ಶಾಲಾ ಮಕ್ಕಳು ಭಾಗವಹಿಸಲು ಜಾಥಾ, ಚಿತ್ರಕಲೆ, ಪ್ರಬಂಧಸ್ಪರ್ಧೆಗಳನ್ನು ಆಯೋಜಿಸಬೇಕು. ಶಾಲಾ ಮತ್ತು ಕಾಲೇಜು ಆವರಣದಲ್ಲಿ ಸ್ವಚ್ಛತೆ ಕಾಪಾಡಲು ಶ್ರಮದಾನ ಆಯೋಜಿಸಬೇಕು. ಶಾಲಾ ಮತ್ತು ಕಾಲೇಜು ಸುತ್ತ–ಮುತ್ತ ಸಸಿ ನೆಡುವ ಕಾರ್ಯಕ್ರಮ ಆಯೋಜಿಸಬೇಕು ಎಂದು ಶಾಲಾ ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಪ್ರವಾಸಿ ಮತ್ತು ಪಾರಂಪರಿಕ ತಾಣಗಳು ಹಾಗೂ ಧಾರ್ಮಿಕ ಕ್ಷೇತ್ರಗಳಲ್ಲಿ ಸ್ವಚ್ಛತೆಗೆ ಚಾಲನೆ ನೀಡಬೇಕು. ಸ್ವಯಂ ಸೇವಕರನ್ನು ತೊಡಗಿಸಿಕೊಂಡು ಪ್ರವಾಸಿ ತಾಣಗಳ ಸುತ್ತ ಸ್ವಚ್ಛತಾ ಕಾರ್ಯ ಕೈಗೊಳ್ಳಬೇಕು. ಬಸ್ ನಿಲ್ದಾಣಗಳಲ್ಲಿ ಸ್ವಚ್ಛತೆ ಕಾಪಾಡಲು ಶ್ರಮದಾನ ಚಟುವಟಿಕೆಗಳನ್ನು ಹಮ್ಮಿಕೊಳ್ಳಬೇಕು. ರೈಲ್ವೆ ನಿಲ್ದಾಣ ಮತ್ತು ಟಿಕೆಟ್ ಕೌಂಟರ್‌ಗಳು, ರೈಲ್ವೆ ಪ್ಲಾಟ್ ಫಾರಂಗಳಲ್ಲಿ ಸ್ವಚ್ಛತೆ ಕಾಪಾಡಲು ಸ್ವಚ್ಛತಾ ಅಭಿಯಾನ ಚಟುವಟಿಕೆಗಳನ್ನು ಹಮ್ಮಿಕೊಳ್ಳಬೇಕು ಎಂದು ಹೇಳಿದರು.

ಸಭೆಯಲ್ಲಿ ನಗರಾಭಿವೃದ್ಧಿ ಕೋಶ ಯೋಜನಾ ನಿರ್ದೇಶಕ ಮಹೇಂದ್ರ ಕುಮಾರ್, ಅಲ್ಲದೆ ಅರಣ್ಯ, ತೋಟಗಾರಿಕೆ, ಪ್ರವಾಸೋದ್ಯಮ, ಶಿಕ್ಷಣ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಇದ್ದರು.

## ವಿಶ್ವರೇಬಿಸ್ ದಿನಾಚರಣೆ ಅಂಗವಾಗಿ ನಾಯಿ, ಬೆಕ್ಕುಗಳಿಗೆ ನಿಯಂತ್ರಣ ಲಸಿಕೆ: ರೇವಣ್ಣ

» ಚಳ್ಳಕೆರೆ

ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಸಾರ್ವಜನಿಕರು ಹಾಗೂಮಕ್ಕಳಿಗೆನಾಯಿಗಳುಕಡಿದು ಅಪಾಯವನ್ನುಂಟು ಮಾಡುತ್ತಿದ್ದು, ಇವುಗಳಿಂದ ರಕ್ಷಣೆ ಪಡೆಯಲು ಪಶುವೈದ್ಯ ಇಲಾಖೆ ರೇಬಿಸ್ ಲಸಿಕಾ ಅಭಿಯಾನ ಮತ್ತು ಅರಿವು ಕಾರ್ಯಕ್ರಮ ಹಮ್ಮಿಕೊಂಡಿದೆ ಎಂದು ಪಶುವೈದ್ಯ ಇಲಾಖೆಯ ಮುಖ್ಯ ಪಶುವೈದ್ಯಾಧಿಕಾರಿ ಡಾ.ಆರ್.ರಾಜಣ್ಣ ತಿಳಿಸಿದರು.

ಅವರು, ತಾಲ್ಲೂಕಿನ ಚನ್ನಮ್ಮನಾಗತಿಹಳ್ಳಿ ಶ್ರೀಕೃಷ್ಣ ಪ್ರೌಢಶಾಲಾ ಆವರಣದಲ್ಲಿ ವಿದ್ಯಾರ್ಥಿಗಳಿಗೆ ರೇಬಿಸ್ ಲಸಿಕಾ ಅಭಿಯಾನ ಕುರಿತು ಮಾಹಿತಿ ನೀಡಿದರು. ಯಾವುದೇ



ಸಂದರ್ಭದಲ್ಲಾಗಲಿ ನಾಯಿಗಳು ಕಡಿದಲ್ಲಿ ಕೂಡಲೇ ಆಸ್ಪತ್ರೆಗೆ ದಾಖಲಾಗಿ ರೇಬಿಸ್ ಲಸಿಕೆಯನ್ನು ಪಡೆಯಬೇಕು.

ಇತ್ತೀಚಿನ ದಿನಗಳಲ್ಲಿ ಹುಚ್ಚುನಾಯಿಗಳ ಕಾಟ ಹೆಚ್ಚಾಗಿದ್ದು, ಇವುಗಳಿಂದ ರಕ್ಷಣೆ ಪಡೆಯಲು ಅವಶ್ಯಕವಾಗಿ ಲಸಿಕೆ ಪಡೆಯಬೇಕು ಎಂದರು.

ಸೆ.28 ವಿಶ್ವರೇಬಿಸ್ ದಿನಾಚರಣೆ ಅಂಗನವಾಗಿ ಈ ಕಾರ್ಯಕ್ರಮವನ್ನು ಆಯೋಜಿಸಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು. ಪರಶುರಾಮಪುರ, ಪುರ್ಲಹಳ್ಳಿ ಮುಂತಾದ ಗ್ರಾಮಗಳ ಶಾಲಾ, ಕಾಲೇಜು ವಿದ್ಯಾರ್ಥಿಗಳಿಗೆ ಜಾಗೃತಿ ಮೂಡಿಸಲಾಯಿತು.




ಹಾವೇರಿ ಜಿಲ್ಲೆಯವರಾದ ಆದ ಹಿರಿಯ ಪತ್ರಕರ್ತರು, ಸಂಯುಕ್ತ ಕರ್ನಾಟಕ ಪತ್ರಿಕೆ ಸಂಪಾದಕರಾಗಿದ್ದ ವಸಂತ ನಾಡಿಗೇರ ಅವರು ನಿಧನಕ್ಕೆ ದಾವಣಗೆರೆ ಜಿಲ್ಲಾ ಕಾರ್ಯನಿರತ ಪತ್ರಕರ್ತರಸಂಘದ ಕಛೇರಿಯಲ್ಲಿ ಶೃದ್ಧಾಂಜಲಿ ಸಭೆ ನಡೆಸಲಾಯಿತು.

## ಜ್ಞಾನವಿಕಾಸ ಕೇಂದ್ರ ಉದ್ಘಾಟನೆ



» ಚಿತ್ರದುರ್ಗ

ಮಹಿಳೆ ಕೇವಲ ಅಡುಗೆ ಮನೆಗೆ ಮಾತ್ರ ಮೀಸಲು ಎನ್ನುವುದು ಸರಿಯಲ್ಲ. ಮಹಿಳೆ ಅಬಲೆಯಲ್ಲ. ಎಲ್ಲಾ ರಂಗದಲ್ಲಿಯೂ ಸಬಲಳು ಎಂದು ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಜಿಲ್ಲಾ ನಿರ್ದೇಶಕ ದಿನೇಶ್ ಪೂಜಾರಿ ಹೇಳಿದರು.

ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಸಿರಿಗೆರೆ ಯೋಜನಾ ಕಚೇರಿ ವ್ಯಾಪ್ತಿಯ ಗುತ್ತಿನಾಡು ವಲಯದ ಸೀಬಾರ ಕಾರ್ಯಕ್ಷೇತ್ರದಲ್ಲಿ ಸರಸ್ವತಿ ನೂತನ ಜ್ಞಾನವಿಕಾಸ ಕೇಂದ್ರ ಉದ್ಘಾಟಿಸಿ ಮಾತನಾಡಿದರು.

ಮಹಿಳೆಯರ ಆರ್ಥಿಕ ಬೆಳವಣಿಗೆಗಾಗಿ ಹೇಮಾವತಿ ಅಮ್ಮನವರು 1993 ರಲ್ಲಿ ಜ್ಞಾನವಿಕಾಸ ಕೇಂದ್ರ ಆರಂಭಿಸಿದರು. ಪ್ರತಿ ತಿಂಗಳು ಮಹಿಳೆಯರಿಗೆ ಉತ್ತಮವಾದ ಮಾಹಿತಿ ನೀಡುವ ಕಾರ್ಯಕ್ರಮವನ್ನು ನಡೆಸಿಕೊಂಡು ಬರಲಾಗುತ್ತಿದೆ. ಆರ್ಥಿಕ, ಸಾಮಾಜಿಕ, ಶೈಕ್ಷಣಿಕವಾಗಿ ಮಹಿಳೆ ಸಮಾಜದ ಮುಖ್ಯವಾಹಿನಿಗೆ ಬರಬೇಕೆಂದು ದಿನೇಶ್ ಪೂಜಾರಿ ತಿಳಿಸಿದರು. ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಆರ್.ನರಸಿಂಹರಾಜ ಮಾತನಾಡಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಗ್ರಾಮೀಣ ಭಾಗದ ಮಹಿಳೆಯರನ್ನು ಸ್ವಾವಲಂಭಿಯನ್ನಾಗಿ ಮಾಡುವುದಕ್ಕಾಗಿ ಅನೇಕ ಯೋಜನೆಗಳನ್ನು ರೂಪಿಸಿದೆ. ಬ್ಯಾಂಕಿನ ಮೂಲಕ ಧರ್ಮಸ್ಥಳದ ಧರ್ಮಾಧಿಕಾರಿ ಡಾ.ವೀರೇಂದ್ರ ಹೆಗಡೆರವರು ಮಹಿಳೆಯರಿಗೆ ಸಾಲಗಳು ಸಿಗುವಂತ ವ್ಯವಸ್ಥೆ ಕಲ್ಪಿಸಿದ್ದಾರೆ. ನೂತನ ಜ್ಞಾನ ವಿಕಾಸ ಕೇಂದ್ರದ ಮಹಿಳೆಯರು ಇದರ ಸದುಪಯೋಗಪಡಿಸಿಕೊಳ್ಳುವಂತೆ ಕರೆ ನೀಡಿದರು. ಯೋಜನಾಧಿಕಾರಿ ರವಿಚಂದ್ರ ಮಾತನಾಡುತ್ತ ಜ್ಞಾನವಿಕಾಸ ಹಾಗೂ ವಾತ್ಸಲ್ಯ ಕಾರ್ಯಕ್ರಮದ ಬಗ್ಗೆ ಜ್ಞಾನವಿಕಾಸ ಕೇಂದ್ರದ ಮಹಿಳೆಯರಲ್ಲಿ ಅರಿವು ಮೂಡಿಸಿದರು.ಗ್ರಾಮ ಪಂಚಾಯಿತಿ ಅಧ್ಯಕ್ಷೆ ಗೀತ, ತಿಪ್ಪಮ್ಮ, ಸಾಕಮ್ಮ, ಜ್ಞಾನವಿಕಾಸ ಸಮನ್ವಯಾಧಿಕಾರಿ ಶಿವಲೀಲಾ ಎಸ್.ಬಾಗೋಡಿ, ಪ್ರಮೋದಿನಿ, ಅಂಬಿಕಾ, ರೇಣುಕಾ, ಜ್ಞಾನವಿಕಾಸ ಕೇಂದ್ರದ ಎಲ್ಲಾ ಸದಸ್ಯರುಗಳು ಭಾಗವಹಿಸಿದ್ದರು.

### ವ್ಯಕ್ತಿ ಕಾಣೆ

ದಾವಣಗೆರೆ: ನಗರದ ಎಂ.ಸಿ.ಸಿ ಬಿ ಬ್ಲಾಕ್ ವಾಸಿಯಾದ ನರೇಶ.ಟಿ.ಪಿ ತಂದೆ ಪ್ರಸಾದ್ 40 ವರ್ಷ ಇವರು ಸೆ.2 ರಂದು ಅಕ್ಕನ ಮನೆಯಿಂದ ಕಾಣೆಯಾಗಿರುತ್ತಾನೆ. ಚಹರೆ ವಿವರ: 5.4 ಅಡಿ ಎತ್ತರ, ಕೋಲು ಮುಖ, ಸಾಧಾರಣ ಮೈ ಮೈಕಟ್ಟು, ಸಿಮೆಂಟ್ ಕಲರ್ ಶರ್ಟ್, ನೀಲಿ ಬಣ್ಣದ ಪ್ಯಾಂಟ್ ಧರಿಸಿರುತ್ತಾರೆ. ಕನ್ನಡ, ತೆಲುಗು ಭಾಷೆ ಮಾತನಾಡುತ್ತಾರೆ. ಇವರ ಬಗ್ಗೆ ಮಾಹಿತಿ ತಿಳಿದು ಬಂದಲ್ಲಿ ಹದಡಿ ಠಾಣೆ ದೂ.ಸಂ. 08192–253100 ಪಿ.ಎಸ್.ಐ ಹದಡಿ ಠಾಣೆ 9480803254, 08192–218405 ಗೆ ಕರೆ ಮಾಡಿ.

## ಪ್ರಮುಖ ಸುದ್ದಿ

# ಬಾಲ್ಯ ವಿವಾಹ ತಡೆಗೆ ಕಠಿಣ ಕಾನೂನು ಜಾರಿಗೆ ತರಬೇಕು

» ಚಿತ್ರದುರ್ಗ

ಹೆಣ್ಣಿಗೆ ಹದಿನೆಂಟು ವರ್ಷ ಹಾಗೂ ಗಂಡಿಗೆ 21 ವರ್ಷವಾಗುವವರೆಗೆ ವಿವಾಹ ಮಾಡಬಾರದೆಂದು ಸಾಕಷ್ಟು ಜಾಗೃತಿ ಮೂಡಿಸುತ್ತಿದ್ದರು ಸಹ ಬಾಲ್ಯ ವಿವಾಹ ಪ್ರಕರಣಗಳು ಜಾಸ್ತಿಯಾಗುತ್ತಿರುವುದನ್ನು ಕಟ್ಟುನಿಟ್ಟಾಗಿ ತಡೆಗಟ್ಟಬೇಕಾಗಿರುವುದರಿಂದ ಕಠಿಣ ಕಾನೂನು ಜಾರಿಗೆ ತರಬೇಕೆಂದು ಆರ್.ಕೆ.ಸರ್ದಾರ್ ಒತ್ತಾಯಿಸಿದರು.

ಟಿಪ್ಪು ಸ್ಪೋರ್ಟ್ಸ್ ಕ್ರಿಕೆಟ್ ಕ್ಲಬ್ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಬಡಾಮಕಾನ್‌ನ ಚಿಸ್ತಿಯಾ ಶಾದಿ ಮಹಲ್‌ನಲ್ಲಿ ಮಂಗಳವಾರ ಹಮ್ಮಿಕೊಳ್ಳಲಾಗಿದ್ದ ಬಾಲ್ಯ ವಿವಾಹ ನಿಷೇಷ ಕಾಯ್ದೆ ಮತ್ತು ಮಹಿಳೆಯರ ಮಕ್ಕಳ ಅಕ್ರಮ ಸಾಗಾಣಿಕೆ ತಡೆ ಕುರಿತು ಜಾಗೃತಿ ಕಾರ್ಯಕ್ರಮ ಹಾಗೂ ಪೋಷಣ್ ಅಭಿಯಾನದಡಿ ಪೋಷಣ್ ಮಾಸಾಚರಣೆ ಉದ್ಘಾಟಿಸಿ ಮಾತನಾಡಿದರು. ಬಾಲ್ಯ ವಿವಾಹ ಶಿಕ್ಷಾರ್ಹ ಅಪರಾಧವಾಗಿರುವುದರಿಂದ ಪೋಷಕರುಗಳು ತಮ್ಮ ಮಕ್ಕಳಿಗೆ ಚಿಕ್ಕಂದಿನಲ್ಲಿಯೇ ವಿವಾಹ ಮಾಡಬಾರದೆಂದು ಅಪ್ರಾಪ್ತ ವಯಸ್ಸಿನ ಬಾಲಕಿಯರು ಗರ್ಭಿಣಿಯರಾಗುತ್ತಿರುವ ಪ್ರಕರಣಗಳು ಸಾಕಷ್ಟು ಕಂಡು ಬರುತ್ತಿದ್ದು,



ಬಡತನ ಹಾಗೂ ಇನ್ನಿತರೆ ಕಾರಣಗಳಿಗಾಗಿ ಹದಿಹರೆಯದವರಿಗೆ ಮದುವೆ ಮಾಡಿದರೆ ಪೋಷಕರುಗಳ ವಿರುದ್ದ ಪೋಕ್ಸೋ ಕೂಡ ದಾಖಲಾಗುತ್ತದೆ. ಹಾಗಾಗಿ ಬಾಲ್ಯ ವಿವಾಹ ಮಾಡಬಾರದೆಂದು ತಾಕೀತು ಮಾಡಿದರು.

ಪೋಷಣ್ ಅಭಿಯಾನದಡಿ ಗರ್ಭಿಣಿ ಹಾಗೂ ಬಾಣಂತಿಯರಿಗೆ ಪೌಷ್ಠಿಕಾಂಶವುಳ್ಳ ಆಹಾರಗಳನ್ನು ನೀಡುವುದರಿಂದ ಜನಿಸುವ ಮಕ್ಕಳು ಆರೋಗ್ಯವಾಗಿರುತ್ತವಲ್ಲದೆ ಮಗು ಮತ್ತು ತಾಯಿಯ ಮರಣ ಪ್ರಮಾಣವನ್ನು ತಗ್ಗಿಸಬಹುದು ಎಂದು ಹೇಳಿದರು.

ಹಿರಿಯ ನ್ಯಾಯವಾದಿ ಬಿ.ಕೆ. ರಹಮತ್‌ವುಲ್ಲಾ ಮಾತನಾಡಿ ಬಾಲ್ಯ ವಿವಾಹ ಶಿಕ್ಷಾರ್ಹ ಅಪರಾಧ. ಎರಡು ವರ್ಷ ಸಜೆಯಾಗುತ್ತದೆ. ಹೆಣ್ಣಿಗೆ ಹದಿನೆಂಟು ವರ್ಷ, ಗಂಡಿಗೆ 21 ವರ್ಷವಾಗಿದ್ದರೆ ಮಾತ್ರ ವಿವಾಹವಾಗಲು ಅರ್ಹರು. ಇಲ್ಲದಿದ್ದರೆ ಅಂತಹ ವಿವಾಹ ಅಸಿಂಧುವಾಗುತ್ತದೆ ಎನ್ನುವ ಅರಿವು ಪೋಷಕರುಗಳಲ್ಲಿ ಮೂಡಬೇಕಿದೆ. ಇಸ್ಲಾಂ ಧರ್ಮದಲ್ಲಿ ನಾಲ್ಕು ಮದುವೆಯಾಗಬಹುದು. ಹಾಗಂತ ಸರ್ಕಾರಿ ನೌಕರ ಒಂದಕ್ಕಿಂತ ಹೆಚ್ಚು ವಿವಾಹವಾದರೆ ಕಾನೂನಿನಡಿ ಶಿಕ್ಷೆಗೊಳಪಡುತ್ತಾನೆ. ತಲಾಖ್ ವಿಚಾರಕ್ಕೆ ಬಂದರೆ ಪ್ರತ್ಯೇಕವಾಗಿ ಶರಿಯತ್ ಇದೆ. ಅದರಡಿ ಬಗೆಹರಿಸಿಕೊಳ್ಳಬಹುದು. ದೇಶದ ಕಾನೂನು ಪರಿಪಾಲನೆ ಮಾಡುವುದು ಧರ್ಮದ ಅರ್ಧ ಭಾಗ ಎನ್ನುವುದನ್ನು ನೆನಪಿನಲ್ಲಿಟ್ಟುಕೊಳ್ಳಬೇಕು. ಅಪ್ರಾಪ್ತ ಬಾಲಕಿಯ ಜೊತೆ ದೈಹಿಕ ಸಂಪರ್ಕವಿಟ್ಟುಕೊಂಡರೆ ಪೋಕ್ಸೋ ಕಾಯಿದೆಯಡಿ ಶಿಕ್ಷೆಗೆ ಗುರಿಯಾಗಬೇಕಾಗುತ್ತದೆ. ಹಾಗಾಗಿ ದೇಶದ ಕಾನೂನು ಪರಿಪಾಲನೆ ಮಾಡಬೇಕು ಎಂದರು.

ಚಿತ್ರದುರ್ಗ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಂ.ಕೆ.ತಾಜ್‌ಪೀರ್ ಮಾತನಾಡುತ್ತ ಬಾಲ್ಯ ವಿವಾಹ ತಡೆಗಟ್ಟುವುದು ಪ್ರತಿಯೊಬ್ಬರ ಜವಾಬ್ದಾರಿ. ಹೆಣ್ಣು–ಗಂಡು ವಿವಾಹವಾಗುವುದು ಪ್ರಕೃತಿ ನಿಯಮ. ಹಾಗಂತ ತಂದೆ ತಾಯಿಗಳು ಕಾನೂನು ಅರಿವಿಲ್ಲದೆ ತಮ್ಮ ಮಕ್ಕಳಿಗೆ ಅಪ್ರಾಪ್ತ ವಯಸ್ಸಿನಲ್ಲಿಯೇ ವಿವಾಹ ಮಾಡುವುದು ಶಿಕ್ಷಾರ್ಹ ಅಪರಾದ ಎನ್ನುವುದು ಗೊತ್ತಿರಬೇಕು. ಸರ್ಕಾರ ಹಾಗೂ ಸಂವಿಧಾನದಡಿ ಹೆಣ್ಣಿಗೆ 18 ವರ್ಷ, ಗಂಡಿಗೆ 21 ವರ್ಷಗಳಾಗಿದ್ದಾಗ ಮಾತ್ರ ವಿವಾಹವಾಗಲು ಅರ್ಹರು ಎನ್ನುವ ಜಾಗೃತಿ ಎಲ್ಲರಲ್ಲೂ ಮೂಡಬೇಕು ಎಂದು ತಿಳಿಸಿದರು.ಜಿಲ್ಲಾ ವಕ್ಫ್ ಮಂಡಳಿ ಅಧ್ಯಕ್ಷ ಇಕ್ಬಾಲ್ ಹುಸೇನ್, ಕರ್ನಾಟಕ ರಾಜ್ಯ ಟಿಪ್ಪುಸುಲ್ತಾನ್ ಅಭಿಮಾನಿಗಳ ಮಹಾವೇದಿಕೆ ರಾಜ್ಯಾಧ್ಯಕ್ಷ ಟಿಪ್ಪುಖಾಸಿಂ ಆಲಿ, ನಗರಸಭೆ ಸದಸ್ಯ ನಸ್ರುಲ್ಲಾ, ನಿವೃತ್ತ ಡಿ.ವೈ.ಎಸ್ಪಿ.ಗಳಾದ ಅಬ್ದುಲ್‌ರೆಹಮಾನ್, ಸೈಯದ್ ಇಸಾಕ್, ಜಿಲ್ಲಾ ವಕ್ಫ್ ಬೋರ್ಡ್ ಅಧಿಕಾರಿ ಅಂಜದ್ ಮೊಹಿನ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್.ಬಣಕಾರ್, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಎ.ಎಂ.ವೀಣ ವೇದಿಕೆಯಲ್ಲಿದ್ದರು.

## ಫಾಸ್ಟ್ ನ್ಯೂಸ್

### ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

» ದಾವಣಗೆರೆ

ಡಾ.ಬಿ.ಆರ್. ಅಂಬೇಡ್ಕರ್ ನಿಗಮಗಳ ವ್ಯಾಪ್ತಿಗೆ ಬರುವ ಜನಾಂಗದ ಫಲಾನುಭವಿಗಳಿಗೆ ಸ್ವಯಂ ಉದ್ಯೋಗ ಯೋಜನೆ, ಐ.ಎಸ್.ಬಿ.ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಎಂ.ಸಿ.ಎಫ್ ಪ್ರೇರಣಾ ಯೋಜನೆ, ಗಂಗಾ ಕಲ್ಯಾಣ ಯೋಜನೆ ಮತ್ತು ಭೂ ಒಡೆತನ ಯೋಜನೆಯಡಿ ಸೌಲಭ್ಯ ಕಲ್ಪಿಸಲು ಅರ್ಜಿ ಆಹ್ವಾನಿಸಲಾಗಿದೆ. ಅರ್ಹರು ಅಕ್ಟೋಬರ್ 10 ರೊಳಗಾಗಿ ಕರ್ನಾಟಕ ಒನ್, ಗ್ರಾಮ-1, ಸೇವಾಸಿಂಧುವಿನಲ್ಲಿ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವ್ಯವಸ್ಥಾಪಕರು, ಡಾ.ಬಿ.ಆರ್ ಅಂಬೇಡ್ಕರ್ ಅಭಿವೃದ್ದಿ ನಿಗಮ, #337/16ಎ-16, ಗಣೇಶ ಲೇಔಟ್, 1ನೇ ಕ್ರಾಸ್ ಪಿ.ಬಿ.ರಸ್ತೆ ದಾವಣಗೆರೆ ಇಲ್ಲಿ ಸಂಪರ್ಕಿಸಲು ಜಿಲ್ಲಾ ವ್ಯವಸ್ಥಾಪಕರು ತಿಳಿಸಿದ್ದಾರೆ.

### ವ್ಯಕ್ತಿ ಕಾಣೆ

» ದಾವಣಗೆರೆ

ಗುಡಾಳ್ ಗ್ರಾಮದ ನಾಗರಾಜ ತಂದೆ ರುದ್ರಪ್ಪ 54 ವರ್ಷ ಇವರು 2023 ರ ಆಗಸ್ಟ್ 1 ರಿಂದ ಕಾಣೆಯಾಗಿರುತ್ತಾನೆ. ಚಹರೆ ವಿವರ: ಇವರ ಬಗ್ಗೆ ಮಾಹಿತಿ ತಿಳಿದು ಬಂದಲ್ಲಿ ಹದಡಿ ಪೊಲೀಸ್ ಠಾಣೆ ದೂ.ಸಂ. 08192-253100 ಪಿ.ಎಸ್.ಐ ಹದಡಿ ಪೊಲೀಸ್ ಠಾಣೆ 9480803254, 08192-218405 ಗೆ ಕರೆ ಮಾಡಿ ತಿಳಿಸಬಹುದಾಗಿದೆ.

### ಉದ್ಯೋಗ ಮೇಳ

» ದಾವಣಗೆರೆ

ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಮಾದರಿ ವೃತ್ತಿ ಕೇಂದ್ರ, ದಾವಣಗೆರೆ ಇವರ ವತಿಯಿಂದ ಸೆ.13 ರಂದು ಬೆಳಗ್ಗೆ 10 ಗಂಟೆಗೆ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಜಿಲ್ಲಾಡಳಿತ ಭವನದ ಕೊಠಡಿ ಸಂಖ್ಯೆ 51 ರಲ್ಲಿ ಉದ್ಯೋಗಮೇಳ ಆಯೋಜಿಸಲಾಗಿದೆ. ಮೇಳದಲ್ಲಿ ಖಾಸಗಿ ಸಂಸ್ಥೆಗಳು ತಮ್ಮ ಸಂಸ್ಥೆಯಲ್ಲಿ ಖಾಲಿ ಇರುವ ಹುದ್ದೆಗಳಿಗೆ ಪಿಯುಸಿ, ಪದವಿ ಮತ್ತು ಸ್ನಾತಕೋತ್ತರ ಪದವಿಯಲ್ಲಿ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳನ್ನು ನೇಮಕಾತಿ ಮಾಡಿಕೊಳ್ಳಲಿದ್ದಾರೆ. ಆಗಮಿಸುವ ಅಭ್ಯರ್ಥಿಗಳು ಕನಿಷ್ಠ 5 ಸೆಟ್ ಬಯೋಡಾಟಾ ಮತ್ತು ಆಧಾರ್ ನಂಬರ್ ನೊಂದಿಗೆ ಭಾಗವಹಿಸಬಹುದು. ಹೆಚ್ಚಿನ ಮಾಹಿತಿಗಾಗಿ: 8105122556, 08192-259446 ಸಂಪರ್ಕಿಸಲು ಉದ್ಯೋಗಾಧಿಕಾರಿ ರವೀಂದ್ರ ತಿಳಿಸಿದ್ದಾರೆ.

### ವ್ಯಕ್ತಿ ಕಾಣೆ

» ದಾವಣಗೆರೆ

ಎಲೆಬೇತೂರು ಗ್ರಾಮದ ನಾಗಪ್ಪ ತಂದೆ ಸಿದ್ದಪ್ಪ 74 ಇವರು ದಿ:9-1-24 ರಂದು ಕಾಣೆಯಾಗಿರುತ್ತಾನೆ. ಚಹರೆ ವಿವರ: ಇವರ ಬಗ್ಗೆ ಮಾಹಿತಿ ತಿಳಿದು ಬಂದಲ್ಲಿ ಹದಡಿ ಪೊಲೀಸ್ ಠಾಣೆ ದೂ.ಸಂ. 08192-253100 ಪಿ.ಎಸ್.ಐ ಹದಡಿ ಪೊಲೀಸ್ ಠಾಣೆ 9480803254, 08192-218405 ಗೆ ಕರೆ ಮಾಡಿ ತಿಳಿಸಬಹುದಾಗಿದೆ.

### ಹಸ್ತಾಂತರ ಕಾರ್ಯಕ್ರಮ

» ದಾವಣಗೆರೆ

ಪವರ್ ಗ್ರಿಡ್ ಕಾರ್ಪೋರೇಷನ್ ಆಫ್ ಇಂಡಿಯಾ ಲಿಮಿಟೆಡ್ ವತಿಯಿಂದ ನಿರ್ಮಿಸಿರುವ ಕಾಮಗಾರಿ ಹಸ್ತಾಂತರ ಕಾರ್ಯಕ್ರಮವು ಸೆ.11 ರಂದು ಬೆಳಗ್ಗೆ 10 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆಯಲಿದೆ. ಪವರ್ ಗ್ರಿಡ್ ಕಾರ್ಪೋರೇಷನ್ ನಿಂದ ಸಿಎಸ್ ಆರ್ ಅನುದಾನದಲ್ಲಿ ಚನ್ನಗಿರಿ ತಾಲ್ಲೂಕಿನ ಗೆದ್ದಲಹಟ್ಟಿ ಗ್ರಾಮದಲ್ಲಿ ಸಿಮೆಂಟ್ ರಸ್ತೆ ಮತ್ತು ಜಿಲ್ಲೆಯ ಚಿಗಟೇರಿ ಆಸ್ಪತ್ರೆಯಲ್ಲಿ-2 ಗೇರ್ ಎಲಿವೇಟರ್, ಲಿಫ್ಟ್ ಪೂರೈಕೆ ಮಾಡಲಾಗಿದೆ.

### ವಿವಿಧ ಕೋರ್ಸ್‌ಗಳಿಗೆ ಅರ್ಜಿ ಆಹ್ವಾನ

» ದಾವಣಗೆರೆ

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದಿಂದ ಪ್ರಸಕ್ತ ಶೈಕ್ಷಣಿಕ ಸಾಲಿನಲ್ಲಿ ಪ್ರಥಮ ವರ್ಷದ ಬಿ.ಎ, ಬಿ.ಕಾಂ., ಬಿ.ಎಸ್‌ಸ್ಸಿ., ಬಿ.ಲಿಬ್,ಐಎಸ್‌ಸ್ಸಿ., ಬಿ.ಸಿ.ಎ., ಬಿ.ಬಿ.ಎ., ಬಿಎಸ್‌ಡಬ್ಲು., ಎಂ.ಎ., ಎಂ.ಕಾಂ., ಎಂ.ಎ.,ಎಂ.ಸಿ.ಜೆ., ಎಂ.ಲಿಬ್,ಐಎಸ್‌ಸಿ., ಎಂ.ಬಿ.ಎ., ಎಂ.ಎಸ್ಸಿ., ಎಂ.ಸಿ.ಎ., ಎಂ.ಎಸ್‌ಡಬ್ಲು., ಪಿಜಿ ಡಿಪ್ಲೋಮಾ., ಡಿಪ್ಲೋಮಾ ಹಾಗೂ ಸರ್ಟಿಫಿಕೇಟ್ ಕೋರ್ಸ್‌ಗಳಿಗೆ ಪ್ರವೇಶಾತಿ ಪ್ರಕ್ರಿಯೆಯು ಪ್ರಾರಂಭವಾಗಿದೆ. ಬಿಪಿಎಲ್ ಕಾರ್ಡ್ ಹೊಂದಿರುವ ಮಹಿಳಾ ವಿದ್ಯಾರ್ಥಿನಿಯರಿಗೆ, ಡಿಫೆನ್ಸ್ , ಮಾಜಿ ಸೈನಿಕ ವಿದ್ಯಾರ್ಥಿಗಳಿಗೆ, ಆಟೋ, ಕ್ಯಾಬ್ ಚಾಲಕರು ಮತ್ತು ಅವರ ಮಕ್ಕಳಿಗೆ ಬೋಧನಾ ಶುಲ್ಕದಲ್ಲಿ ಶೇ.10ರಷ್ಟು ರಿಯಾಯಿತಿ ನೀಡಲಾಗುವುದು. ಅಲ್ಲದೇ ಕೋವಿಡ್-19 ನಿಂದ ಮೃತಪಟ್ಟವರ ಮಕ್ಕಳಿಗೆ, ತೃತೀಯ ಲಿಂಗಿಗಳಿಗೆ, ದೃಷ್ಠಿಹೀನ ವಿದ್ಯಾರ್ಥಿಗಳಿಗೆ ಪೂರ್ಣ ಶುಲ್ಕ ವಿನಾಯಿತಿ ಇರುತ್ತದೆ. ಹಾಗೂ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಎಲ್ಲಾ ರಜಾದಿನಗಳಂದು ಸಹ ಕಚೇರಿ ಎಂದಿನಂತೆ ಕಾರ್ಯನಿರ್ವಹಿಸುತ್ತದೆ. ಹೆಚ್ಚಿನ ಮಾಹಿತಿಗಾಗಿ ವಿಶ್ವವಿದ್ಯಾನಿಲಯದ ವೆಬ್‌ಸೈಟ್ www.ksoumysuru.ac.in ವೀಕ್ಷಿಸುವುದು ಅಥವಾ ಮೊ.ನಂ. 8310676181, 9902517906, 9916009318, 8095939359 ಕರೆ ಮಾಡುವುದು ಅಥವಾ ಖುದ್ದಾಗಿ ಕ.ರಾ.ಮು.ವಿ. ಪ್ರಾದೇಶಿಕ ಕೇಂದ್ರ, ಶ್ರೀ ಜೆ.ಹೆಚ್.ಪಟೇಲ್ ಬಡಾವಣೆ, ಶಾಮನೂರು ಹಿಂಭಾಗ, ನಾಗನೂರು ರಸ್ತೆಯಲ್ಲಿರುವ ಕಚೇರಿಯನ್ನು ಸಂಪರ್ಕಿಸಲು ಪ್ರಾದೇಶಿಕ ನಿರ್ದೇಶಕರಾದ ವಿಜಯ್ ಪ್ರಕಾಶ್ ತಿಳಿಸಿದ್ದಾರೆ.

# ಸೆ.14ಕ್ಕೆ ಕೇಂದ್ರದ ನಡೆ ವಿರೋಧಿಸಿ ಪ್ರತಿಭಟನೆ

» ಚಿತ್ರದುರ್ಗ



ಪ್ರಜಾಪ್ರಭುತ್ವದಲ್ಲಿ ಒಕ್ಕೂಟ ವ್ಯವಸ್ಥೆಯನ್ನು ರಕ್ಷಿಸದಿದ್ದರೆ ಸಂವಿಧಾನ ಉಳಿಯುವುದಿಲ್ಲ. ಬಹುತ್ವ ಭಾರತದಲ್ಲಿ ಧರ್ಮವನ್ನು ಗುರಿಯಾಗಿಸಿಕೊಂಡು ಹತ್ತು ವರ್ಷಗಳಿಂದಲೂ ಆಕ್ರಮಣ ನಡೆಸುತ್ತಿರುವ ಕೇಂದ್ರದ ಸರ್ವಾಧಿಕಾರಿ ನಡೆ ವಿರೋಧಿಸಿ ಸೆ.14 ರಂದು ಬೆಂಗಳೂರಿನಲ್ಲಿ ಪ್ರತಿಭಟನಾ ಸಭೆ ನಡೆಯಲಿದೆ ಎಂದು ಸಾಹಿತಿ ಪ್ರೊ. ಎಸ್.ಜಿ.ಸಿದ್ದರಾಮಯ್ಯ ತಿಳಿಸಿದರು.

ಪ್ರವಾಸಿ ಮಂದಿರದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸ್ವಾತಂತ್ರ್ಯ ಪೂರ್ವದಲ್ಲಿದ್ದ ಆತಂಕಕ್ಕಿಂತ ಈಗ ಭಿನ್ನವಾಗಿದೆ. ಕೇಂದ್ರದಲ್ಲಿ ಅಧಿಕಾರ ನಡೆಸುತ್ತಿರುವ ಬಿಜೆಪಿ. ಇಡಿ ಒಕ್ಕೂಟದ ವ್ಯವಸ್ಥೆಯನ್ನೇ ನಾಶ ಮಾಡಲು ಹೊರಟಿದೆ. ಪ್ರಶ್ನೆ ಮಾಡಲು ವಿರೋಧ ಪಕ್ಷದವರೆ ಇರಬಾರದೆನ್ನುವ ರೀತಿಯಲ್ಲಿ ವರ್ತಿಸುತ್ತಿದೆ ಎಂದರು.

ರಾಷ್ಟ್ರಪತಿ, ರಾಜ್ಯಪಾಲರುಗಳನ್ನು ನಾಮಕಾವಸ್ಥೆಗಷ್ಟೆ ಇಟ್ಟುಕೊಂಡಿದೆ. ಕೇಂದ್ರ ಮತ್ತು ರಾಜ್ಯಗಳ ನಡುವೆ ಸಮನ್ವಯತೆಯನ್ನು ತೂಗಿಸಿಕೊಂಡು ಹೋಗಬೇಕಾಗಿರುವ ರಾಜ್ಯಪಾಲರು ಕೀಕೊಟ್ಟ ಗೊಂಬೆಯಂತೆ ಕುಣಿಯುತ್ತ ಸಂವಿಧಾನಾತ್ಮಕ ನಡೆಯನ್ನು ಎಲ್ಲಿಯೂ ತೋರಿಸದಿರುವುದು ನೋವಿನ ಸಂಗತಿ ಎಂದು ಬೇಸರ ವ್ಯಕ್ತಪಡಿಸಿದರು.

ಹಿಂದಿ ರಾಷ್ಟ್ರ ಭಾಷೆಯಲ್ಲ. ತ್ರಿಭಾಷ ಸೂತ್ರವನ್ನು ಒಪ್ಪಿಕೊಂಡಿರುವುದರಿಂದ ಭಾಷೆಯ ಜೊತೆ ಬದುಕು ಕಳೆದುಕೊಳ್ಳುತ್ತಿದ್ದೇವೆ. ಜನಪ್ರತಿನಿಧಿಗಳು ಮೌನ ವಹಿಸಿದ್ದಾರೆ. ರಾಜ್ಯದಿಂದ ಸಂಸತ್‌ಗೆ ಆಯ್ಕೆಯಾಗಿರುವವರು ನಮ್ಮ ಪಾಲಿನ ಹಕ್ಕು ಕೇಳದಷ್ಟು ದುರ್ಬಲರಾಗಿದ್ದಾರೆ. ಇಂದಿರಾಗಾಂಧಿ ದೇಶದ ಪ್ರಧಾನಿಯಾಗಿದ್ದಾಗ ಬ್ಯಾಂಕುಗಳನ್ನು ರಾಷ್ಟ್ರೀಕರಣಗೊಳಿಸಿದರು. ಆದರೆ ಇಂದು ಬ್ಯಾಂಕ್‌ಗಳಲ್ಲಿ ಕುಳಿತಿರುವವರೆಲ್ಲಾ ಹೊರ ರಾಜ್ಯದವರೆ. ಕನ್ನಡಿಗರಿಗೆ ಉದ್ಯೋಗ ವಿಲ್ಲದಂತಾಗಿದೆ. ವಿಲೀನಿಕರಣದ ಹೆಸರಿನಲ್ಲಿ ಉದ್ಯೋಗ ಕಿತ್ತುಕೊಳ್ಳುತ್ತಿರುವ ಇಂದಿನ ಅಪಾಯಕಾರಿ ಪರಿಸ್ಥಿತಿಯಲ್ಲಿ ಪ್ರಾದೇಶಿಕ ಅಸ್ಮಿತೆಯನ್ನು ಉಳಿಸಿಕೊಳ್ಳುವ ಹೊಣೆಗಾರಿಕೆ ಎಲ್ಲರ ಮೇಲಿದೆ ಎಂದು ಹೇಳಿದರು.ಹೊಸ ಶಿಕ್ಷಣ ನೀತಿಯಿಂದ ಭಾಷೆಯನ್ನು ಕಳೆದುಕೊಳ್ಳುತ್ತಿದ್ದೇವೆ. ಐಟಿ, ಇಡಿ, ಸಿಬಿಐ.ಯನ್ನು ದುರುಪಯೋಗ ಪಡಿಸಿಕೊಳ್ಳುತ್ತಿರುವ ಕೇಂದ್ರ ಸರ್ಕಾರದ ವಿರುದ್ದ ಜನಸಾಮಾನ್ಯರನ್ನು ಎಚ್ಚರಿಸುವುದಕ್ಕಾಗಿ ಹಮ್ಮಿಕೊಂಡಿರುವ ಪ್ರತಿಭಟನಾ ಸಭೆಯಲ್ಲಿ ಜಿಲ್ಲೆಯ ಸಮಾನ ಮನಸ್ಕರು, ಯುವ ಸಮೂಹ, ರೈತರು, ಜನ ಸಾಮಾನ್ಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಪ್ರೊ. ಎಸ್.ಜಿ.ಸಿದ್ದರಾಮಯ್ಯ ಮನವಿ ಮಾಡಿದರು.ಜಾಣಗೆರೆ ವೆಂಕಟರಾಮಯ್ಯ ಮಾತನಾಡಿ ಅನ್ಯಾಯ, ಆಕ್ರಮಗಳನ್ನು ಯಾರು ಪ್ರಶ್ನಿಸುತ್ತಾರೋ ಅಂತಹವರನ್ನು ಕೇಂದ್ರ ಸರ್ಕಾರ ಧಮನ ಮಾಡಲು ಹೊರಟಿದೆ. ಮೂರು ರೈತ ವಿರೋಧಿ ಕಾಯಿದೆಗಳನ್ನು ಹಿಂದಕ್ಕೆ ಪಡೆಯುವಂತೆ ದೆಹಲಿಯಲ್ಲಿ ಲಕ್ಷಾಂತರ ರೈತರು ಒಂದು ವರ್ಷಗಳಿಗೂ ಹೆಚ್ಚು ಕಾಲ ಧರಣಿ ನಡೆಸಿದರೂ ಕೇಂದ್ರ ಸರ್ಕಾರ ಇಂದಿಗೂ ಚಕಾರವೆತ್ತುತ್ತಿಲ್ಲ. ದೇಶಕ್ಕೆ ಅನ್ನ ನೀಡುವ ರೈತ ಅಪಾಯದಲ್ಲಿದ್ದಾನೆ ಎಂದರು.

ಮಹಿಳೆಯರ ಮೇಲೆ ಅತ್ಯಾಚಾರ ಕೊಲೆಯಾಗುತ್ತಿದೆ. ವರ್ಷಕ್ಕೆ ಎರಡು ಕೋಟಿ ಉದ್ಯೋಗಗಳನ್ನು ನೀಡುವುದಾಗಿ ಮೊದಲ ಬಾರಿಗೆ ಪ್ರಧಾನಿಯಾಗುವ ಮುನ್ನವೆ ನರೇಂದ್ರಮೋದಿ ನೀಡಿದ ಭರವಸೆಗಳೆಲ್ಲಾ ಹುಸಿಯಾಗಿದೆ. ರೈತರ ಆದಾಯ ದುಪ್ಪಟ್ಟಾಗಲಿಲ್ಲ. ರೈತರು, ದಲಿತರು, ಕನ್ನಡಪರ ಸಂಘಟನೆಗಳ ಜೊತೆ ಚರ್ಚಿಸಿ ಇದೆ ತಿಂಗಳ ಹದಿನಾಲ್ಕರಂದು ಪ್ರತಿಭಟನಾ ಸಭೆ ನಡೆಸುತ್ತಿದ್ದೇವೆ. ಜಸ್ಟಿಸ್ ಗೋಪಾಲಗೌಡ, ನಾಗಮೋಹನ್‌ದಾಸ್, ದೇವನೂರು ಮಹದೇವ ಇವರುಗಳು ಪ್ರತಿಭಟನಾ ಸಭೆಯ ನೇತೃತ್ವ ವಹಿಸಲಿದ್ದಾರೆಂದರು.

ಸರ್ವೋದಯ ಕರ್ನಾಟಕ ಪಕ್ಷದ ಜಿಲ್ಲಾಧ್ಯಕ್ಷ ಜೆ.ಯಾದವರೆಡ್ಡಿ ಮಾತನಾಡುತ್ತ ರಾಷ್ಟ್ರೀಯತೆ ಹೆಸರಿನಲ್ಲಿ ಕೇಂದ್ರ ಸರ್ಕಾರ ಪ್ರಾದೇಶಿಕ ಭಾಷೆ, ಸಂಸ್ಕೃತಿಯನ್ನು ಹತ್ತಿಕ್ಕುವ ಕೆಲಸ ಮಾಡುತ್ತಿದೆ. ರಾಜ್ಯದ ಹಿತದೃಷ್ಟಿಯ ವಿಚಾರವಾಗಿ ಸಂಸದರು ಒಮ್ಮೆಯೂ ಸಂಸತ್‌ನಲ್ಲಿ ಧ್ವನಿ ಎತ್ತದಷ್ಟು ಅಸಹಾಯಕರಾಗಿದ್ದಾರೆ. ರಾಜ್ಯದ ಪಾಲಿನ ಹಕ್ಕು ಕೇಳಬೇಕಾದರೆ ಸುಪ್ರೀಂಕೋರ್ಟ್ ಮೊರೆ ಹೋಗಬೇಕಾಗಿದೆ. ಸರ್ವಾಧಿಕಾರಿ ಹಿಟ್ಲರ್‌ನಂತೆ ವರ್ತಿಸುತ್ತಿರುವ ಕೇಂದ್ರದಿಂದ ಒಕ್ಕೂಟದ ವ್ಯವಸ್ಥೆ ನಾಶವಾಗಲು ಬಿಡಬಾರದೆಂಬ ಕಾರಣಕ್ಕಾಗಿ ಬೆಂಗಳೂರಿನಲ್ಲಿ ಪ್ರತಿಭಟನಾ ಸಭೆ ನಡೆಯಲಿದೆ ಎಂದು ಹೇಳಿದರು.

ಪ್ರೊ.ರುದ್ರಪ್ಪ ಹನಗವಾಡಿ, ರೈತ ಮುಖಂಡರುಗಳಾದ ಧನಂಜಯ, ಚಿಕ್ಕಪ್ಪನಹಳ್ಳಿ ರುದ್ರಸ್ವಾಮಿ ಹಾಜರಿದ್ದರು.

### ತರಾಸು ಲಯನ್ಸ್ ಕ್ಲಬ್‌ವತಿಯಿಂದ ವನಮಹೋತ್ಸವ ಕಾರ್ಯಕ್ರಮ

## ನೈಸರ್ಗಿಕ ಸಂಪತ್ತು ರಕ್ಷಣೆಗೆ ಕೈಜೋಡಿಸಿ

» ಚಳ್ಳಕೆರೆ



ತಾಲ್ಲೂಕಿನ ತಳಕು ಗ್ರಾಮದ ಸರ್ಕಾರಿ ಹಿರಿಯಪ್ರಾಥಮಿಕ ಶಾಲಾ ಆವರಣದಲ್ಲಿ ತರಾಸು ಲಯನ್ಸ್ ಕ್ಲಬ್ ವನಮಹೋತ್ಸವ ಕಾರ್ಯಕ್ರಮವನ್ನು ಶಾಲಾ ಆವರಣದಲ್ಲಿ ಗಿಡಗಳನ್ನು ನಡೆವ ಮೂಲಕ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ತರಾಸು ಲಯನ್ಸ್ ಕ್ಲಬ್‌ನ ನೂತನ ಅಧ್ಯಕ್ಷ ಕೆ.ಟಿ.ಶ್ರೀರಾಮರೆಡ್ಡಿ, ಕಳೆದ ಹಲವಾರು ವರ್ಷಗಳಿಂದ ನಾವು ಗಿಡಗಳನ್ನು ನೆಟ್ಟು ಬೆಳೆಸುವ ಪ್ರಾಮಾಣಿಕ ಪ್ರಯತ್ನ ಮಾಡದೇ ಇರುವ ಹಿನ್ನೆಲೆಯಲ್ಲಿ ಮಳೆ ಕೊರತೆಯೊಂದಿಗೆ ನೈಸರ್ಗಿಕ ಸಂಪತ್ತನ್ನು ರಕ್ಷಿಸಲು ವಿಫಲವಾಗಿದ್ದೇವೆ. ಪ್ರಕೃತಿಸೌಂದರ್ಯವನ್ನು ಆರಾಧಿಸುವ ಗುಣ ಎಲ್ಲರಲ್ಲೂ ಬೆಳೆಸಿಕೊಳ್ಳಬೇಕು ಎಂದರು.

ಬಿಜೆಪಿ ಮುಖಂಡ ಹಾಗೂ ನಿರ್ದೇಶಕ ಈ.ರಾಮರೆಡ್ಡಿ ಮಾತನಾಡಿ, ವನಮಹೋತ್ಸವ ಕಾರ್ಯಕ್ರಮ ಕೇವಲ ಶಾಲಾ, ಕಾಲೇಜುಗಳ ಆವರಣದಲ್ಲಿ ನಡೆಸದೆ ಎಲ್ಲಾ ಸಾರ್ವಜನಿಕರು ಸೇರಿ ದೊಡ್ಡ ಪ್ರಮಾಣದಲ್ಲಿ ಗಿಡಗಳನ್ನು ನೆಡುವ ಕಾರ್ಯ ಮಾಡಬೇಕಿದೆ. ರಸ್ತೆ ಅಗಲೀಕರಣ ಸಂದರ್ಭದಲ್ಲಿ ಮರಗಳನ್ನು ಕಡಿಯಲಾಗುತ್ತಿದೆ. ವಿಶೇಷವಾಗಿ ರಸ್ತೆಯ ಎರಡೂ ಬದಿಯಲ್ಲಿ ಮರಗಳನ್ನು ಬೆಳೆಸಿದರೆ ಎಲ್ಲಾ ಅನುಕೂಲಗಳನ್ನು ನಾವು ಪಡೆಯಬಹುದಾಗಿದೆ. ಅರಣ್ಯ ಇಲಾಖೆಯೂ ಸಹ ಗಿಡಗಳನ್ನು ಬೆಳೆಸುವ ಕಾರ್ಯಕ್ಕೆ ಹೆಚ್ಚು ಗಮನನೀಡಬೇಕು ಎಂದರು.

ಕ್ಲಬ್ ನಿರ್ದೇಶಕರಾದ ಕೇಶವರೆಡ್ಡಿ, ವಿಜಯಕುಮಾರ್, ರಮೇಶ್, ಮರಿಯಪ್ಪ, ನಾಗರಾಜ, ಬಂಜಿಗೆರೆ ಅರುಣಪ್ಪ, ಲಿಂಗಾರೆಡ್ಡಿ, ಸುರೇಶ್‌ಬಾಬು, ನಾರಾಯಣರೆಡ್ಡಿ, ಮುಖ್ಯ ಶಿಕ್ಷಕ ಜಯರಾಮ್, ಶಿಕ್ಷಕರಾದ ಪ್ರಕಾಶ್, ಕಮಲಮ್ಮ, ಶ್ರೀಕಾಂತ್, ಎಸ್‌ಡಿಎಂಸಿ ಅಧ್ಯಕ್ಷ ಕೃಷ್ಣಮೂರ್ತಿ ಮುಂತಾದವರು ಉಪಸ್ಥಿತರಿದ್ದರು.

## 24ರಂದು ಸಾಣೇಹಳ್ಳಿ ಶ್ರೀಮಠದಲ್ಲಿ ಗುರುಗಳ ಸ್ಮರಣೆ



» ಚಿತ್ರದುರ್ಗ

ಮದುಜ್ಜಯಿನಿ ಸದ್ಧರ್ಮ ಸಿಂಹಾಸನಾಧೀಶ 20ನೆಯ ತರಳಬಾಳು ಜಗದ್ಗುರು ಶ್ರೀ 1108 ಶ್ರೀ ಶಿವಕುಮಾರ ಶಿವಾಚಾರ್ಯ ಮಹಾಸ್ವಾಮಿಗಳವರು 40 ವರ್ಷಗಳ ಕಾಲ ಸಾಮಾಜಿಕ, ಧಾರ್ಮಿಕ, ಶೈಕ್ಷಣಿಕ, ಸಾಂಸ್ಕೃತಿಕ ಕ್ಷೇತ್ರದಲ್ಲಿ ಹೊಸ ಮನ್ವಂತರವನ್ನೇ ಸೃಷ್ಠಿಸಿದ ಮಹಾಗುರು. ಇಂತಹ ಗುರುಗಳ ಸ್ಮರಣೆಯನ್ನು 24 ರಂದು ಸಾಣೇಹಳ್ಳಿ ಶ್ರೀಮಠದಲ್ಲಿ ನಡೆಯಲಿದೆ. ಬೆಳಗ್ಗೆ 8 ಗಂಟೆಗೆ ಶಿವಮಂತ್ರ ಲೇಖನ, ಶಿವಧ್ವಜಾರೋಹಣ ನಡೆಯಲಿದೆ. ಸಂಜೆ 5 ಗಂಟೆಗೆ ವೇದಿಕೆಯ ಕಾರ್ಯಕ್ರಮ ನಂತರ ಮಹಾಬೆಳಗು ನಾಟಕ ಪ್ರದರ್ಶನ ಸಾಣೇಹಳ್ಳಿಯಲ್ಲಿ ನಡೆಯಲಿದೆ. 24ರ ಬೆಳಗ್ಗೆ ಮಾಡೋಣವೆಂದು ಹಿಂದಿನ ವರ್ಷವೇ ಪೂಜ್ಯರು ಹೇಳಿದ್ದರು. ಬಂದು ಹೋಗುವವರಿಗೆ ಸಂಜೆ ತೊಂದರೆಯಾಗುತ್ತದೆ. ಆದುದರಿಂದ ಬೆಳಗ್ಗೆ ಮಾಡಬೇಕು ಎಂದು ಶ್ರೀಮಠದಲ್ಲಿ ಸೇರಿದ್ದ ಭಕ್ತರ ಸಭೆಯಲ್ಲಿ ಚರ್ಚೆ ನಡೆಯಿತು. ಶ್ರೀ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮಿಗಳವರು ಆಶೀರ್ವಚನದಲ್ಲಿ ಮುಂದಿನ ವರ್ಷದಿಂದ ನಿಮ್ಮೆಲ್ಲರ ಅಭಿಪ್ರಾಯದಂತೆ ಬೆಳಗ್ಗೆ 11 ಗಂಟೆಗೆ ಮಾಡೋಣ. ಈ ವರ್ಷ ಬೇಡ ಎಂದು ಆದೇಶ ಮಾಡಿದರು. ತಾಲ್ಲೂಕು ವೀರಶೈವ ಸಮಾಜದ ಅಧ್ಯಕ್ಷ ಎಸ್ ಸಿದ್ದಪ್ಪ, ಸ್ಥಳೀಯ ಸಲಹಾ ಸಮಿತಿ ಅಧ್ಯಕ್ಷ ಎ ಸಿ ಚಂದ್ರಪ್ಪ, ಕಲಾಸಂಘದ ಕಾರ್ಯದರ್ಶಿ ಎಸ್ ಕೆ ಪರಮೇಶ್ವರಯ್ಯ, ಮುಖಂಡರಾದ ಹೆಬ್ಬಳ್ಳಿ ಮಲ್ಲಿಕಾರ್ಜುನ, ಜಾನಕಲ್ ತಿಮ್ಮಜ್ಜ, ಬನ್ನಿಹಳ್ಳಿ ಅಜ್ಜಪ್ಪ, ರಾಮೇಗೌಡ, ಸಿದ್ದಯ್ಯ, ಎಸ್ ಆರ್ ಚಂದ್ರಶೇಖರಯ್ಯ, ದೃವಕುಮಾರ್, ಕೃಷ್ಣಪ್ಪ, ಗಂಗಾಧರಪ್ಪ, ಮಹೇಶ್ವರಪ್ಪ, ಪ್ರಕಾಶ್ ದಕ್ಷಿಣಮೂರ್ತಿ, ರವಿಕುಮಾರ, ಸಾಣೇಹಳ್ಳಿ ಗ್ರಾಮಸ್ಥರು, ಉಭಯ ಶಾಲೆಯ ಮುಖ್ಯಸ್ಥರು, ಸುತ್ತಮುತ್ತ ಗ್ರಾಮಸ್ಥರು ಭಾಗವಹಿಸಿದ್ದರು.



**ಜಿಲ್ಲೆಯ ನೂತನ ರಕ್ಷಣಾಧಿಕಾರಿಯಾಗಿ ಅಧಿಕಾರ ವಹಿಸಿಕೊಂಡ ರಂಜಿತ್‌ಕುಮಾರ್ ಬಂಡಾರುರವರನ್ನು ದುಗ್ಗಾವರ ಎಲ್‌ಐಸಿ ರಂಗಸ್ವಾಮಿ ಅಭಿಮಾನಿ ಬಳಗದಿಂದ ಅಭಿನಂದಿಸಲಾಯಿತು. ಅಧ್ಯಕ್ಷ ದುಗ್ಗಾವರ ಎಲ್‌ಐಸಿ ರಂಗಸ್ವಾಮಿ ಗಾಯಕ ಮೊರಾರ್ಜಿ ಹಾಗೂ ಚಿದಾನಂದಯಾದವ್ ಇದ್ದರು.**

## ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ

» ದಾವಣಗೆರೆ



ಸರ್ಕಾರದ ಮಹತ್ವಕಾಂಕ್ಷಿ ಐದು ಗ್ಯಾರಂಟಿ ಯೋಜನೆಗಳಯಶಸ್ವಿಅನುಷ್ಠಾನಕುರಿತುಮಂಗಳ ವಾರ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ನಡೆಯಿತು.

ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದಶಾಮನೂರುಟಿ.ಬಸವರಾಜ್‌ಅಧ್ಯಕ್ಷತೆ ವಹಿಸಿ ಮಾತನಾಡಿದರು. ಅರ್ಹರಿಗೆ ಗ್ಯಾರಂಟಿ ಯೋಜನೆಗಳನ್ನು ತಲುಪಿಸಲು ಅಧಿಕಾರಿಗಳು, ಸಂಬಂಧಿಸಿದವರು ಪ್ರಾಮಾಣಿಕವಾಗಿ ಕೆಲಸ ಮಾಡಬೇಕು ಎಂದು ಹೇಳಿದರು. ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಸಮೀಪ ಚಾಲಕರು ಬಸ್ ನಿಲ್ಲಿಸುವುದಿಲ್ಲ ಹಾಗೂ ವಿವಿಧ ಗ್ರಾಮಗಳಿಗೆ ಸಾರಿಗೆ ವ್ಯವಸ್ಥೆ ಸರಿಯಿಲ್ಲ ಎಂದು ಜನರು ದೂರುತ್ತಿದ್ದಾರೆ ಎಂದು ಸದಸ್ಯರು ತಿಳಿಸಿದಾಗ ಪ್ರಕರಣಗಳ ಬಗ್ಗೆ ಗಮನಿಸುತ್ತೇವೆ ಎಂದು ಹೇಳಿದರು.

ಗೃಹಜ್ಯೋತಿ ಯೋಜನೆಯಡಿ ದಾವಣಗೆರೆ ಜಿಲ್ಲೆಯಲ್ಲಿ 487228 ಜನರು ಹೆಸರನ್ನು ನೋಂದಾಯಿಸಿಕೊಂಡಿದ್ದು 433758 ಆರ್. ಆರ್. ಸಂಖ್ಯೆ ಹೊಂದಿರುವ ಗ್ರಾಹಕರು ಇದರ ಲಾಭ ಪಡೆಯುತ್ತಿದ್ದಾರೆ. 53470 ಗ್ರಾಹಕರು ನೋಂದಾಯಿಸಿ ಕೊಂಡಿಲ್ಲ ಎಂದು ಸಭೆಯಲ್ಲಿ ತಿಳಿಸಿದಾಗ ಮುಂದಿನ ಸಭೆಯೊಳಗೆ ಎಲ್ಲ ಅರ್ಜಿ ವಿಲೇವಾರಿ ಮಾಡಿ ಅರ್ಹರಿಗೆ ಯೋಜನೆ ಲಾಭ ಮುಟ್ಟಿಸಬೇಕು ಎಂದು ತಿಳಿಸಿದರು.

ಉಚಿತ ವಿದ್ಯುತ್ ಪೂರೈಕೆಯಿಂದ ಜನರು ಸಾಕಷ್ಟು ಪ್ರಯೋಜನ ಪಡೆಯುತ್ತಿದ್ದಾರೆ. ಅನ್ನಭಾಗ್ಯ ಯೋಜನೆಯಡಿ ಅಕ್ಕಿ ಜತೆಗೆ ಮಾಸಿಕ ಅಕ್ಕಿ ಹಣ ಫಲಾನುಭವಿಗಳ ಖಾತೆಗೆ ಜಮಾ ಆಗುತ್ತಿದೆ. ಇನ್ನೂ ಯುವ ನಿಧಿ ಸಹ ಚಾಲ್ತಿಯಲ್ಲಿದೆ ಆದರೇ ಸಣ್ಣಪುಟ್ಟ ಸಮಸ್ಯೆಗಳಿಂದಾಗಿ ಇನ್ನೂ ಸಾಕಷ್ಟು ಜನರಿಗೆ ಕೆಲ ಗ್ಯಾರಂಟಿಗಳ ಸೌಲಭ್ಯ ದಕ್ಕುತ್ತಿಲ್ಲ. ಈ ನಿಟ್ಟಿನಲ್ಲಿ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ಇದನ್ನು ಗಂಭೀರವಾಗಿ ಪರಿಗಣಿಸಿ, ಯಾವ ಕಾರಣಕ್ಕಾಗಿ ಸೌಲಭ್ಯ ಸಿಗುತ್ತಿಲ್ಲ, ಇದಕ್ಕಾಗಿ ಏನು ಮಾಡಬೇಕೆಂಬ ಬಗ್ಗೆ ಜನಸಾಮಾನ್ಯರಲ್ಲಿ ಅರಿವು ಮೂಡಿಸುವಂತಹ ಕೆಲಸ ಆಯಾ ಇಲಾಖೆಗಳು ಮಾಡಬೇಕು ಎಂದು ತಿಳಿಸಿದರು. ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ ಇಟ್ನಾಳ್ ಮಾತನಾಡಿ ಗ್ಯಾರಂಟಿ ಯೋಜನೆಗಳ ಸಮರ್ಪಕ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಕಾರ್ಯಪ್ರವೃತ್ತರಾಗಲು ಈಗಾಗಲೇ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿ ಅಧಿಕಾರಿಗಳೊಂದಿಗೆ ನಿರಂತರ ಸಂಪರ್ಕದಲ್ಲಿದ್ದು ಕಾರ್ಯನಿರ್ವಹಿಸಲಾಗುತ್ತದೆ. ತಾಲೂಕು ಮಟ್ಟದಲ್ಲಿನ ಅಧಿಕಾರಿಗಳೊಂದಿಗೆ ಸಹ ಸಭೆ ನಡೆಸಿ ಪ್ರಾಧಿಕಾರದ ಸದಸ್ಯರು ನೀಡಿದ ಸಲಹೆ, ಪ್ರಸ್ತಾಪಿಸಿದ ಅಂಶಗಳ ಬಗ್ಗೆ ಜಿಲ್ಲಾಧಿಕಾರಿಗಳ ಗಮನಕ್ಕೆ ತರಲಾಗುವುದು ಎಂದು ತಿಳಿಸಿದರು.

## ಪ್ರಮುಖ ಸುದ್ದಿ

### ಸೆ.15ರ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ-2024

# ಮಾನವ ಸರಪಳಿ ಕಾರ್ಯಕ್ರಮ ಯಶಸ್ವಿ ಎಲ್ಲರ ಜವಾಬ್ದಾರಿ

» ಚಳ್ಳಕೆರೆ



ರಾಜ್ಯ ಸರ್ಕಾರದ ಪ್ರಮುಖ ಕಾರ್ಯಕ್ರಮವಾದ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ-2024 ಪ್ರಜಾಪ್ರಭುತ್ವಕ್ಕಾಗಿ ಮಾನವ ಸರಪಳಿ ಕಾರ್ಯಕ್ರಮ ಸೆ. 15ರ ಭಾನುವಾರ ನಡೆಯಲಿದ್ದು, ತಾಲ್ಲೂಕಿನ ಎಲ್ಲಾ ಅಧಿಕಾರಿಗಳು, ಸಿಬ್ಬಂದಿ ವರ್ಗ ಹಾಗೂ ವಿವಿಧ ಯೋಜನೆಗಳ ಎಲ್ಲಾ ಫಲಾನುಭವಿಗಳು ಮಾನವ ಸರಪಳಿ ಕಾರ್ಯಕ್ರಮದಲ್ಲಿ ತಪ್ಪದೆ ಭಾಗವಹಿಸಬೇಕಿದೆ. ಈ ನಿಟ್ಟಿನ ಎಲ್ಲಾ ಅಧಿಕಾರಿಗಳು ಕಾಯೋನ್ಮುಖರಾಗಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ತಹಶೀಲ್ದಾರ್ ರೇಹಾನ್‌ಪಾಷ ತಿಳಿಸಿದರು.

ಅವರು, ತಾಲ್ಲೂಕು ಕಚೇರಿ ಆವರಣದಲ್ಲಿ ತಾಲ್ಲೂಕು ಮಟ್ಟದ ಅಧಿಕಾರಿಗಳ ಎರಡನೇ ಸುತ್ತಿನ ಸಭೆಯನ್ನು ಉದ್ದೇಶಿಸಿ ಮಾತನಾಡಿದರು. ಈಗಾಗಲೇ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ, ಕ್ಷೇತ್ರದ ಶಾಸಕ ಟಿ.ರಘುಮೂರ್ತಿ, ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಕಾರ್ಯಕ್ರಮದ ರೂಪುರೇಷೆಗಳ ಬಗ್ಗೆ ಸವಿಸ್ತಾರವಾದ ಮಾಹಿತಿ ನೀಡಿದ್ಧಾರೆ.


ಈ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವುದು ಎಲ್ಲರ ಜವಾಬ್ದಾರಿಯಾಗಿದೆ. ವಿಶೇಷವಾಗಿ ತಾಲ್ಲೂಕು ಪಂಚಾಯಿತಿ, ಶಿಕ್ಷಣ ಇಲಾಖೆ, ಸಿಡಿಪಿಒ, ಕಾರ್ಮಿಕ ಇಲಾಖೆ, ಆರೋಗ್ಯ ಇಲಾಖೆ, ಕೃಷಿ ಇಲಾಖೆ ಸೇರಿದಂತೆ ಎಲ್ಲಾ ಇಲಾಖೆಗಳು ತಮ್ಮ,ತಮ್ಮ ವ್ಯಾಪ್ತಿಯಲ್ಲಿ ಬರುವ ಸಂಸ್ಥೆಗಳು ಪ್ರತಿನಿಧಿಗಳು, ಸಾರ್ವಜನಿಕರಿಗೆ ಕಾರ್ಯಕ್ರಮದ ಬಗ್ಗೆ ಸ್ವಷ್ಟ ಮಾಹಿತಿ ನೀಡಿ ಅವರೂ ಸಹ ಭಾಗವಹಿಸುವಂತೆ ಮನವಿ ಮಾಡಿಕೊಳ್ಳಬೇಕು ಎಂದರು.

ಸಭೆಯಲ್ಲಿ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಎಚ್.ಶಶಿಧರ, ಬಿಇಒ ಕೆ.ಎಸ್.ಸುರೇಶ್, ಕೃಷಿಅಧಿಕಾರಿ ಅಶೋಕ್, ಸಿಡಿಪಿಒ ಹರಿಪ್ರಸಾದ್, ತೋಟಗಾರಿಕೆಅಧಿಕಾರಿ ವಿರೂಪಾಕ್ಷಪ್ಪ, ಕಾರ್ಮಿಕಅಧಿಕಾರಿ ಕುಸುಮ, ಆರೋಗ್ಯ ಇಲಾಖೆಯ ಎಸ್.ಬಿ.ತಿಪ್ಪೇಸ್ವಾಮಿ ಮುಂತಾದವರು ಉಪಸ್ಥಿತರಿದ್ದರು.



# ಇದು ಎಂಥಾ ಲೋಕವಯ್ಯಾ!





ರಾಜನೊಬ್ಬ ಬಹಳ ವರ್ಷಗಳ ಕಾಲ ತನಗೆ ಮಕ್ಕಳಾಗಲಿಲ್ಲವೆಂದು ಒಬ್ಬ ಮಾಂತ್ರಿಕ ಗುರುವಿನ ಹತ್ತಿರ ತೆರಳಿ ಸಲಹೆ ಕೇಳಿದ. ಆಗ ಆ ಮಾಂತ್ರಿಕ ಗುರು ರಾಜನಿಗೆ ಸಂತಾನವಾಗಬೇಕಾದರೆ ಬಾಲಕನೊಬ್ಬನ ಬಲಿ ನೀಡಬೇಕು ಎಂದು ಹೇಳಿದನಂತೆ. ಆಗ ರಾಜ್ಯದಲ್ಲಿ ಎಲ್ಲಾ ಕಡೆ ಡಂಗೂರ ಸಾರಿಸಿದ ರಾಜ, ಬಡವನೊಬ್ಬನಿಗೆ ಸಂಪತ್ತಿನ ಆಮಿಷ ತೋರಿಸಿ ಅವನ ಹಲವು ಮಕ್ಕಳಲ್ಲಿ ದಡ್ಡನಂತಿರುವ ಮಗನನ್ನು ಕರೆದು ಕೊಂಡು ಬಂದ.

ನಿನ್ನನ್ನು ಬಲಿ ಕೊಡುವ ಮೊದಲು ನಿನ್ನ ಬಯಕೆ ಏನಾದರೂ ಇದ್ದರೆ ತಿಳಿಸು ಎಂದು ಆ ಬಾಲಕನಿಗೆ ಕೇಳಿದನಂತೆ. ಮೌನವಾಗಿದ್ದ ಮಗು ಇದ್ದಕ್ಕಿದ್ದಂತೆ ಆಶ್ಚರ್ಯಕರವಾಗಿ ತಲೆ ಎತ್ತಿ ರಾಜನ ಮುಖವನ್ನು ನೋಡಿ ತನಗೆ ಸ್ವಲ್ಪ ಮರಳು ಬೇಕೆಂದು ಹೇಳಿತು. ಮಗು ಆಟವಾಡಲು ಮರಳು ಕೇಳಿರಬೇಕು ಎಂದು ಕೊಂಡ ರಾಜ ಮಗುವಿನ ಇಂತಹ ಕೊನೆಯ ಸಣ್ಣ ಬಯಕೆ ತೀರಿಸಲು ಆ ಬಾಲಕನ ಎದುರು ಮರಳಿನ ರಾಶಿಯೊಂದನ್ನು ತಂದು ಹಾಕುವಂತೆ ಆಜ್ಞಾಪಿಸಿದ.

ಆ ಮರಳಿನ ರಾಶಿ ಕಂಡ ಕೂಡಲೇ ಆ ಬಾಲಕ ಅದರ ಬಳಿ ತೆರಳಿ ಕೈ ಹಾಕಿ ಮರಳಿನ ಗುಡ್ಡೆ ಮಾಡುತ್ತಾ ಅದರಲ್ಲಿ ನಾಲ್ಕು ಮನೆಗಳಂತೆ ಗೂಡುಗಳನ್ನು ನಿರ್ಮಿಸಿದ. ಇದನ್ನೆಲ್ಲಾ ಸಾವಧಾನ ಚಿತ್ತನಾಗಿ ನೋಡುತ್ತಾ ನಿಂತ ರಾಜನಿಗೆ ಆಶ್ಚರ್ಯವೊಂದು ಕಾದಿತ್ತು. ತಾನೇ ನಿರ್ಮಿಸಿದ ನಾಲ್ಕು ಗೂಡುಗಳಲ್ಲಿ ಮೂರು ಗೂಡುಗಳನ್ನು ಧ್ವಂಸ ಮಾಡಿದ ಬಾಲಕ, ನಂತರ ಸುಮ್ಮನೆ ಹೋಗಿ ತಲೆ ತಗ್ಗಿಸಿ ಮೂಲೆಯಲ್ಲಿ ಕುಳಿತು ಬಿಟ್ಟ.

ರಾಜ ಹಾಗೂ ಮಾಂತ್ರಿಕ ಗುರುವಿಗೆ ಬಾಲಕನ ಈ ವಿಚಿತ್ರ ವರ್ತನೆಯ ಹಿಂದೆ ಏನು ರಹಸ್ಯ ಅಡಗಿದೆ ಎಂದು ಅರ್ಥವಾಗಲಿಲ್ಲ. ಬಾಲಕನ ಹತ್ತಿರ ತೆರಳಿ, ಈ ವರ್ತನೆಯ ಹಿಂದಿನ ಮರ್ಮವೇನು? ಎಂದು ಕೇಳಿದರು. ಆ ಬಾಲಕ ನೋವಿನ ಧ್ವನಿಯಲ್ಲಿ ಮೆಲ್ಲಗೆ ಮಾತನಾಡಲಾರಂಭಿಸಿದ.

ಮೊದಲಿನ ಮನೆ ನನ್ನ ತಂದೆ– ತಾಯಿಯದ್ದು. ನನ್ನನ್ನು ಸಲಹಿ ರಕ್ಷಣೆ ಮಾಡಬೇಕಾದ ಮಹತ್ತರ ಹೊಣೆಗಾರಿಕೆ ಅವರ ಮೇಲಿತ್ತು, ಆದರೆ ಹಣದ ಆಸೆಗಾಗಿ ತಮ್ಮ ಜವಾಬ್ದಾರಿಯನ್ನು ಮರೆತು ನಿಮಗೆ ನನ್ನನ್ನು ಮಾರಾಟ ಮಾಡಿ ಬಿಟ್ಟರು. ನನ್ನ ಪಾಲಿನ ಒಂದು ಬಹು ಮುಖ್ಯ ಮನೆ ಇಲ್ಲದಂತಾಯಿತು. ಹೀಗಾಗಿ ಮೊದಲ ಮರಳಿನ ಗೂಡನ್ನು ಧ್ವಂಸ ಮಾಡಿದೆ.

ಪ್ರತಿಯೊಬ್ಬರ ಬದುಕಿನಲ್ಲಿ ಗುರುವಿನ ಸ್ಥಾನ ಮಹತ್ವವಾದದು. ಆದರೆ ಇಂದು ಸರಿ ತಪ್ಪುಗಳ ಬಗ್ಗೆ ತಿಳಿಸಿ ಹೇಳಬೇಕಾದ ಒಬ್ಬ ಗುರು ಸ್ಥಾನದಲ್ಲಿರುವ ವ್ಯಕ್ತಿ ತಾನೇ ಎದುರಿಗೆ ನಿಂತು ನನ್ನ ವಧೆ ಮಾಡುವಂತೆ ನಿರ್ದೇಶನ ನೀಡುತ್ತಿದ್ದಾನೆ, ನನ್ನ ಪಾಲಿಗೆ ಇದ್ದ ಗುರುವಿನ ಸ್ಥಾನವೂ ಸಹ ಇಲ್ಲದಂತಾಯಿತು ಹೀಗಾಗಿ ಎರಡನೇ ಮನೆಯನ್ನೂ ಧ್ವಂಸ ಮಾಡಿದೆ.

ರಾಜ ಪ್ರತ್ಯಕ್ಷ ದೈವ ಎನ್ನುತ್ತಾರೆ. ಪ್ರಜೆಗಳನ್ನು ತನ್ನ ಸ್ವಂತ ಮಕ್ಕಳಂತೆ ರಕ್ಷಿಸಿ ಸಲಹಬೇಕಾದ ಹೊಣೆಗಾರಿಕೆ ಅವನ ಮೇಲಿದೆ. ಆದರೆ ನಮ್ಮ ರಾಜ, ಪುಟ್ಟ ಬಾಲಕ ಎಂದು ಸಹ ನೋಡದೆ ಕೇವಲ ತನ್ನ ಸ್ವಾರ್ಥಕ್ಕಾಗಿ ನನ್ನನ್ನು ಕೊಲ್ಲಲು ಹೊರಟಿದ್ದಾನೆ. ಹೀಗಾಗಿ ನನ್ನ ಮೂರನೇ ಭರವಸೆಯೂ ನೀರು ಪಾಲಾದಂತಾಯಿತು. ಹೀಗಾಗಿ ನಾನು ಮೂರನೇ ಮನೆಯನ್ನು ಸಹ ಧ್ವಂಸ ಮಾಡಿದೆ ಎಂದ.

ಪುಟ್ಟ ಬಾಲಕನ ಬಾಯಿಯಿಂದ ಇಂತಹ ಮಾರ್ಮಿಕ ಮಾತು ಕೇಳಿದ ರಾಜನಿಗೆ ಆಘಾತವಾಯಿತು. ಹಾಗಾದರೆ ಇನ್ನೊಂದು ಮನೆ ಉಳಿದಿದೆಯಲ್ಲ ಅದು ಯಾರ ಮನೆ ಎಂದು ಅಳುಕುತ್ತಲೇ ಕೇಳಿದ. ಆ ಬಾಲಕ ಆಕಾಶದ ಕಡೆ ಮುಖ ಮಾಡಿ ವೀಕ್ಷಿಸುತ್ತಾ ಈಗ ನನ್ನ ಬಳಿ ಉಳಿದಿರುವ ಭರವಸೆ ಎಂದರೆ ಆ ಭಗವಂತ ಮಾತ್ರ. ಇಡೀ ಜಗತ್ತಿನ ಹೊಣೆ ಹೊತ್ತ ಅವನೇ ನನ್ನ ರಕ್ಷಣೆ ಮಾಡಬೇಕು. ಹೀಗಾಗಿ ನಾಲ್ಕನೇ ಮನೆಯನ್ನು ಉಳಿಸಿದ್ದೇನೆ ಎಂದು ಹೇಳುತ್ತಾ ಮೌನಕ್ಕೆ ಜಾರಿದ.

ಇದೊಂದು ಕಥೆಯಾಗಿರಬಹುದು. ಆದರೆ ಈ ಕಥೆಯಲ್ಲಿ ಆ ಪುಟ್ಟ ಬಾಲಕನಿಗೆ ಒದಗಿದಂತಹ ಪರಿಸ್ಥಿತಿಗಿಂತ ಇನ್ನೂ ಹೆಚ್ಚಿನ ಘೋರ ದುರ್ಗತಿ ನಮ್ಮ ನೀರಿನ ಮೂಲಗಳಿಗೆ ಒದಗಿದೆ ಎಂದರೆ ಖಂಡಿತ ನಾವು ಹೇಳುತ್ತಿರುವ ಮಾತು ಅತಿಶಯೋಕ್ತಿ ಅಲ್ಲ.

ಸಜ್ಜನ ಸಮಾಜದಿಂದ ನೀರಿನ ಮೇಲೆ ಆಗುತ್ತಿರುವ ದೌರ್ಜನ್ಯ: ದೇವರಿಗೆ ಮುಡಿಸಿ ತೆಗೆದ ಹೂವುಗಳ ರಾಶಿ, ಹೊಳೆಯಲ್ಲಿ ಮುಳಗೆದ್ದು, ಅಲ್ಲಿಯೇ ತಮ್ಮ ಧರಿಸಿದ ಹಳೇ ಬಟ್ಟೆ ಬಿಟ್ಟು ಬರುವ ಭಕ್ತರು. ಪೂಜೆ, ಶಾಂತಿ, ಶ್ರಾದ್ಧ, ಹೋಮ– ಹವನವಾದ ನಂತರ ಬಳಸಿ ಉಳಿದ ಎಲ್ಲಾ ತ್ಯಾಜ್ಯ. ಚೌಲ, ಪಿತೃಕರ್ಮ, ಹರಕೆಯ ನಂತರ ತೆಗೆದ ಕೂದಲು, ಸತ್ತವರ ಅಸ್ತಿ ಹಾಗೂ ಉಳಿದ ಅಥವಾ ಹಳಸಿದ ಆಹಾರ ಎಲ್ಲವೂ ನೀರಿಗೆ!!



## ಶಿಕ್ಷಿತರಿಂದ ಆಗುತ್ತಿರುವ ದೌರ್ಜನ್ಯ

ಕಾರ್ಖಾನೆ ತ್ಯಾಜ್ಯ, ಆಸ್ಪತ್ರೆಗಳ ತ್ಯಾಜ್ಯ, ಜೊತೆಗೆ ವಿಷಕಾರಿ ಎಂದು ತಿಳಿದಿದ್ದರೂ ಸಹ ಸ್ವಚ್ಛತೆ ಎಂಬ ನೆಪದಿಂದ ಪರಿಸರ ಹಾಗೂ ಜೈವಿಕ ಸರಪಳಿಯನ್ನೇ ನಾಶ ಮಾಡುವ ಸೋಪು, ಡಿಟರ್ಜೆಂಟ್ ಮಾರ್ಜಕಗಳು, ಮೇಕಪ್‌ಗೆ ಬಳಸುವ ರಾಸಾಯನಿಕಗಳು ನೇರವಾಗಿ ನೀರಿಗೆ!!

ಕೃಷಿಯಿಂದ ಆಗುತ್ತಿರುವ ದೌರ್ಜನ್ಯ: ಅವ್ಯಾಹತವಾದ ರಸಗೊಬ್ಬರ ಹಾಗೂ ಕ್ರಿಮಿನಾಶಕಗಳ ಬಳಕೆ, ಕೊಳೆತ ತರಕಾರಿ ಹಾಗೂ ಕಳೆಯ ವಿಲೇವಾರಿ, ಎಲ್ಲವೂ ನೀರಿಗೆ...

## ಸರ್ಕಾರಿ ಯಂತ್ರಗಳಿಂದ ಆಗುತ್ತಿರುವ ದೌರ್ಜನ್ಯ

ಪ್ರತಿಯೊಬ್ಬರಿಗೂ ಅತಿ ಅಗತ್ಯವಾಗಿ ಬೇಕಾದ ಶುದ್ಧವಾದ ಸಿಹಿ ನೀರನ್ನು ಒದಗಿಸಬೇಕಾದ ಹೊಣೆಗಾರಿಕೆ ಹೊತ್ತ ಸರ್ಕಾರಗಳು ಹಾಗೂ ಆಡಳಿತ ಯಂತ್ರ ನೀರಿನ ಮೂಲಗಳಿಗೆ ಆಗುತ್ತಿರುವ ಅನ್ಯಾಯವನ್ನು ನೋಡಿಕೊಂಡು ಕಂಡರೂ ಕಾಣದಂತೆ ಹಾಗೂ ಪರಿಸರ ವಿಜ್ಞಾನಿಗಳು ಹಾಗೂ ತಜ್ಞರು ನೀಡಿದ ಎಚ್ಚರಿಕೆ ಮಾತುಗಳು ಕೇಳಿದರೂ ಕೇಳಿಸದಂತೆ ಸುಮ್ಮನೆ ಕೂತಿವೆ. ಊರಿನ ಮಲ–ಮೂತ್ರ, ಹೊಲಸು ತ್ಯಾಜ್ಯಗಳು ಚರಂಡಿಗಳ ಮೂಲಕ ನೇರವಾಗಿ ನೀರಿನ ಮೂಲಗಳಿಗೆ ಬಂದು ಸೇರಲು ತಮ್ಮ ಅಪಾರವಾದ ಕೊಡುಗೆಯನ್ನು ಸರ್ಕಾರಗಳು ನೀಡುತ್ತಿವೆ.

ಹೀಗೆ ಇಂದು ನೀರಿನ ಮೂಲಗಳ ಮೇಲೆ ಪ್ರತಿಯೊಬ್ಬನು ಪ್ರತ್ಯಕ್ಷವಾಗಿ ಹಾಗೂ ಪರೋಕ್ಷವಾಗಿ ದಬ್ಬಾಳಿಕೆ ಹಾಗೂ ದೌರ್ಜನ್ಯ ಮಾಡುತ್ತಿದ್ದಾನೆ. ಈಗ ನೀರಿನ ಮೂಲಗಳ ರಕ್ಷಣೆಯ ಹೊಣೆಗಾರಿಕೆ ಏನಿದ್ದರೂ ಅದು ಆ ಭಗವಂತನಿಂದ ಮಾತ್ರ ಸಾಧ್ಯ ಎಂಬ ಪರಿಸ್ಥಿತಿ ಉಂಟಾಗಿದೆ. ಸರ್ಕಾರ ಮಾಡುವ ಪರಿಹಾರೋಪಾಯಗಳು ಆನೆ ಹೊಟ್ಟೆಗೆ ಅರೆಕಾಸಿನ ಮಜ್ಜಿಗೆ ಎಂಬಂತಾಗಿದೆ.

ಮನುಷ್ಯನ ನಾಗರಿಕತೆಯ ಬೆಳವಣಿಗೆ ಹಾಗೂ ವಿನಾಶಕ್ಕೆ ನೀರೇ ಕಾರಣ ಎಂಬುದನ್ನು ಅರಿಯದಿದ್ದರೆ ವಿನಾಶ ಕಟ್ಟಿಟ್ಟ ಬುತ್ತಿ. ನಮ್ಮ ಮುಂದಿನ ಪೀಳಿಗೆಗಾಗಿ ಸಾಧ್ಯವಾಗುವಂತಹ ಕೆಲವು ಪರಿಹಾರೋಪಾಯಗಳನ್ನು ಜನಸಾಮಾನ್ಯರು ಕಾರ್ಯರೂಪಕ್ಕೆ ತರಬಹುದಾಗಿದೆ.

## ಪರಿಹಾರ 1

ಮೊದಲು ನಾನು ಯಾವುದೇ ಕಾರಣಕ್ಕೂ ನಮ್ಮ ಮನೆಯ ತ್ಯಾಜ್ಯವನ್ನು ನೀರಿನ ಮೂಲಗಳಿಗೆ ಎಸೆಯುವುದಿಲ್ಲ ಎಂದು ಪ್ರತಿಯೊಬ್ಬರೂ ಸಂಕಲ್ಪ ಮಾಡಬೇಕು. ಹೀಗೆ ತಿಳಿಯದವರಲ್ಲಿ ಜಾಗೃತಿ ಮೂಡಿಸಬೇಕು.

## ಪರಿಹಾರ 2

ಮನೆಯಲ್ಲಿ ರಾಸಾಯನಿಕ ಮಾರ್ಜಕ ಸೋಪು ಮತ್ತು ಡಿಟರ್ಜೆಂಟ್‌ಗಳ ಬಳಕೆಯನ್ನು ಆದಷ್ಟು ಕಡಿಮೆ ಮಾಡಬೇಕು ಹಾಗೂ ಇದಕ್ಕೆ ಪರ್ಯಾಯವಾದ ವಸ್ತುಗಳ ಬಳಕೆ ಬಗ್ಗೆ ಗಮನ ಹರಿಸಬೇಕು. ಇದರಿಂದ ಹೊಸ ಅನ್ವೇಷಣೆಗಳ ಜೊತೆ ನಮ್ಮ ಜೇಬಿಗೆ ಆಗುತ್ತಿರುವ ಹೊರೆಯು ಸಹ ಕಡಿಮೆ ಆಗುತ್ತದೆ.

## ಪರಿಹಾರ 3

ಸಾವಯವ ರೀತಿ ಹಾಗೂ ಗೃಹ ಕೈಗಾರಿಕೆಯಲ್ಲಿ ತಯಾರಾದ ಆಹಾರ ಪದಾರ್ಥಗಳು ಮಾತ್ರ ನಮ್ಮ ಅಡಿಗೆ ಮನೆ ಸೇರುವಂತೆ ನೋಡಿಕೊಳ್ಳಬೇಕು. ಕಾರ್ಖಾನೆಗಳಿಂದ ಬಂದ ಆಹಾರ ಸಾಮಗ್ರಿಗಳನ್ನು ತಿರಸ್ಕರಿಸಬೇಕು.

## ಪರಿಹಾರ 4

ಸಾವಯವ ರೀತಿಯ ಕೃಷಿ ಕಾಯಕದಲ್ಲಿ ತೊಡಗಿದವರನ್ನು ಪ್ರೋತ್ಸಾಹಿಸಬೇಕು.

## ಪರಿಹಾರ 5

ಸರ್ಕಾರಗಳು ರಾಜಕಾರಣ ಬಿಟ್ಟು ನೀರಿನ ಮೂಲಗಳನ್ನು ಪ್ರಾಮಾಣಿಕವಾಗಿ ಪೋಷಿಸುವ, ರಕ್ಷಿಸುವ ದೃಢ ಸಂಕಲ್ಪ ಮಾಡಬೇಕು ಹಾಗೂ ಅವುಗಳ ಮೇಲೆ ಆಗುತ್ತಿರುವ ದೌರ್ಜನ್ಯಗಳನ್ನು ನಿಯಂತ್ರಿಸಲು ಕಠಿಣವಾದ ಕಾನೂನುಗಳ ಅನುಷ್ಠಾನಕ್ಕೆ ಮಾರ್ಗ ಸೂಚಿಗಳನ್ನು ಹುಡುಕಬೇಕು.

## ಕೊನೆಯ ಮಾತು

ಮೂರ್ಖ ಮನುಷ್ಯ ತನ್ನ ನೀರಿನ ಮೂಲಗಳಿಗೆ ಕಸ, ಹೊಲಸು ಹಾಗೂ ತ್ಯಾಜ್ಯ ಹಾಕಿ, ಶಾಲೆ– ಕಾಲೇಜಿಗೆ ಬಂದು ನೀರಿನ ಮಾಲಿನ್ಯದ ಬಗ್ಗೆ ಪಾಠ ಹೇಳುತ್ತಾನೆ. ಮನೆಯಲ್ಲಿ ಸಾವಿರಾರು ರೂಪಾಯಿ ವೆಚ್ಚ ಮಾಡಿ ಫಿಲ್ಟರ್ ಯಂತ್ರ ಖರೀದಿಸುತ್ತಾನೆ. ಗಣ್ಯ, ಉನ್ನತ ಶಿಕ್ಷಣ ಪಡೆದ ವ್ಯಕ್ತಿಗಳು ದೊಡ್ಡ ದೊಡ್ಡ ಆಸ್ಪತ್ರೆಗಳನ್ನು ನಿರ್ಮಿಸಿ ತ್ಯಾಜ್ಯವನ್ನು ನದಿಗೆ ಬಿಡುತ್ತವೆ.

**ಇದು ಎಂಥಾ ಲೋಕವಯ್ಯಾ...**

■ ಲೇಖನ
ಶ್ರೀಧರ್ ಎನ್.ಎಂ. ಮೊ:

# ಪೋಕ್ಸೋ ತಡೆ, ಬಾಲ್ಯ ವಿವಾಹ ನಿಷೇಧ ಅನುಷ್ಠಾನಲ್ಲಿ ಶಿಕ್ಷಕರ ಜವಾಬ್ದಾರಿ ಹೆಚ್ಚಿದೆ. ಮಹಾವೀರ ಮ.ಕರಣ್ಣವರ

» **ದಾವಣಗೆರೆ**

ಪೋಕ್ಸೋ ಕಾನೂನು ಉಲ್ಲಂಘನೆ ತಡೆ ಮತ್ತು ಬಾಲ್ಯ ವಿವಾಹ ತಡೆಗಟ್ಟುವಲ್ಲಿ ಶಿಕ್ಷಕರ ಪಾತ್ರ ಬಹು ಮುಖ್ಯವಾದದು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ. ಕರೆಣ್ಣವರು ತಿಳಿಸಿದರು.

ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಪೋಕ್ಸೋ ತಡೆ ಸಮಿತಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ಶಿಕ್ಷಣ ಇಲಾಖೆ ಇವರ ಸಹಯೋಗದೊಂದಿಗೆ ದಾವಣಗೆರೆ ತಾಲೂಕಿನ ಶಾಲಾ ಶಿಕ್ಷಕಿಯರಿಗಾಗಿ ನಗರದ ಗುರುಭವನದಲ್ಲಿ ಏರ್ಪಡಿಸಲಾದ ಒಂದು ದಿನದ ಕಾರ್ಯಗಾರ ಮತ್ತುಕಾನೂನಿನಅರಿವುಕಾರ್ಯಕ್ರಮಉದ್ಘಾಟಿಸಿ



ಮಾತಾನಾಡಿದರು. ಇತ್ತೀಚಿನ ದಿನಗಳಲ್ಲಿ ವರದಿಯಾಗುತ್ತಿರುವ ಪೋಕ್ಸೋ ಪ್ರಕರಣಗಳನ್ನು ತಡೆಯುವಲ್ಲಿ ಮತ್ತು ಬಾಲ್ಯ ವಿವಾಹಗಳನ್ನು ತಡೆಯುವಲ್ಲಿ ಶಿಕ್ಷಕರ ಜವಾಬ್ದಾರಿ ಹೆಚ್ಚಿದೆ ಎಂದು ಮನವರಿಕೆ ಮಾಡಿದರು. ಶಿಕ್ಷಕರಾದವರು ವಿದ್ಯಾರ್ಥಿ, ವಿದ್ಯಾರ್ಥಿನಿಯರಿಗೆ ಕೇವಲ ಪಠ್ಯಕ್ಕೆ ಸಂಬಂಧಿಸಿದ ಪಾಠಕ್ಕೆ ಸೀಮಿತವಾಗದೇ ಪಠ್ಯೇತರ ವಿಷಯಗಳ ಮಾಹಿತಿಗಳನ್ನು ಸಹ ವಿದ್ಯಾರ್ಥಿಗಳಿಗೆ ತಿಳಿಸಬೇಕೆಂದರು. ಯಾವುದೇ ಒಬ್ಬ ವ್ಯಕ್ತಿಯ ಜೀವನದಲ್ಲಿ ಶಿಕ್ಷಕರ ಪಾತ್ರ ಬಹುಮುಖ್ಯವಾಗಿದ್ದು ಇದು ಜೀವನದ್ದಕ್ಕೂ ನಡೆಯಬೇಕೆಂದು ತಿಳಿಸಿದರು.ಅಧ್ಯಕ್ಷತೆಯನ್ನು ವಹಿಸಿದ್ದ ಕ್ಷೇತ್ರ ಶಿಕ್ಷಣಾಧಿಕಾರಿ ಪುಷ್ಪಲತಾ ಮಾತಾನಾಡಿ ಸಮಾಜದಲ್ಲಿ ಗಂಡು ಮತ್ತು ಹೆಣ್ಣು ಮಕ್ಕಳನ್ನು ಪೋಷಣಾ ಕಾರ್ಯದಲ್ಲಿ ಎಲ್ಲರದೂ ಬಹುದೊಡ್ಡ ಜವಾಬ್ದಾರಿ ಇದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿ ಪ್ರಕಾಶ್ ಇವರು ಮಹಿಳೆಯರು, ಮಕ್ಕಳಿಗಾಗಿ ಇರುವ ಕಾನೂನುಗಳ ಬಗ್ಗೆ ಮತ್ತು ವಿವಿಧ ಇಲಾಖೆಗಳ ಸಮನ್ವಯತೆಯ ಬಗ್ಗೆ ಸಂಪೂರ್ಣವಾದ ಮಾಹಿತಿಯನ್ನು ನೀಡಿದರು.

# ಕೈಗಾರಿಕೆ ಬೆಳವಣಿಗೆ ಅಭಿವೃದ್ಧಿಗೆ ಸಹಕಾರ

» **ದಾವಣಗೆರೆ**

ಜಿಲ್ಲೆಯ ಕೈಗಾರಿಕಾ ಘಟಕಗಳ ಮೂಲಭೂತ ಸೌಕರ್ಯಗಳು, ಕೈಗಾರಿಕೋದ್ಯಮಿಗಳ ಕುಂದುಕೊರತೆ, ಕೈಗಾರಿಕಾ ಪ್ರದೇಶಕ್ಕೆ ಸಂಬಂಧಿಸಿದ ಸಮಸ್ಯೆ ಪರಿಹರಿಸುವ ನಿಟ್ಟಿನಲ್ಲಿ ಜಿಲ್ಲಾಡಳಿತದ ಸಹಕಾರ ಸದಾ ಇರುತ್ತದೆ ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ. ತಿಳಿಸಿದರು. ಅವರು ಮಂಗಳವಾರ ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆದ ಜಿಲ್ಲಾ ಮಟ್ಟದ ಏಕಗವಾಕ್ಷಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಹೆಚ್.ಪಿ.ಸಿ ಎಕೋ ರಿಸ್ಯೆಕ್ಲೀನರ್ ಘಟಕವು ನಗರದ ಘನ ತ್ಯಾಜ್ಯ ವಸ್ತುಗಳಾದ ಸಾವಯವ ತ್ಯಾಜ್ಯ, ಪ್ಲಾಸ್ಟಿಕ್, ಚಪ್ಪಲಿ ತ್ಯಾಜ್ಯ, ಗಾಜಿನ ಬಾಟಲಿಗಳಂತಹ ವಸ್ತುಗಳನ್ನು ಮರುಬಳಕೆಗೆ ಹೆಚ್ಚಿನ ಪ್ರಮಾಣದಲ್ಲಿ ಪ್ರಯತ್ನ ಮಾಡಲಾಗುವುದು ಎಂದು ತಿಳಿಸಿದರು.ಲೋಕಿಕೆರೆ ರಸ್ತೆಯಲ್ಲಿರುವ ಕೆ.ಎಸ್. ಎಸ್.ಐ.ಡಿ.ಸಿ ಕೈಗಾರಿಕಾ ವಸಹಾತುವನ್ನು 2003ನೇ ಇಸವಿಯಲ್ಲಿ ನಗರಸಭೆಗೆ ಹಸ್ತಾಂತರಗೊಂಡಿರುತ್ತದೆ. ಅಂದಿನಿಂದಲೂ ನಗರ ಸಭೆ, ಮಹಾನಗರ ಪಾಲಿಕೆಗೆ ನಾವುಗಳು ಕಂದಾಯವನ್ನು ಪಾವತಿಸುತ್ತಾ ಬಂದಿರುತ್ತೇವೆ. ಹಸ್ತಾಂತರಗೊಂಡು 21 ವರ್ಷಗಳಾದರೂ ಸಹ ಮೂಲಭೂತ ಸೌಕರ್ಯಗಳಾದ ರಸ್ತೆ,



ಬೀದಿ ದೀಪ, ಒಳಚರಂಡಿ, ಸಮಸ್ಯೆಗಳು ಬಗೆಹರಿದಿರುವುದಿಲ್ಲ ಎಂದು ಸಭೆಯಲ್ಲಿ ಕೈಗಾರಿಕೋದ್ಯಮಿಗಳು ಪ್ರಸ್ತಾಪಿಸಿದಾಗ ಇದಕ್ಕೆ ಸಂಬಂಧ ಪಟ್ಟ ಅಧಿಕಾರಿಗಳು ಮಾಹಿತಿ ಸಂಗ್ರಹಿಸಿ ಸೂಕ್ತ ಕ್ರಮವಹಿಸಲು ತಿಳಿಸಲಾಗುವುದು ಎಂದು ತಿಳಿಸಿದರು.

ಈ ಬಾರಿ ಪ್ರಾಸ್ತಾಪ ಆಗಿರುವ ಎಲ್ಲ ಸಮಸ್ಯೆಗಳಿಗೆ ಮುಂದಿನ ಸಭೆ ವೇಳೆಗೆ ಪರಿಹಾರ ಹುಡುಕಿಕೊಂಡು ಬರುವಂತೆ ಸೂಚಿಸಿದರು.

ಸಭೆಯಲ್ಲಿ ಮಹಾನಗರ ಪಾಲಿಕೆ ಆಯುಕ್ತಾರಾದ ರೇಣುಕಾ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಕೃಷ್ಣನಾಯ್ಕ , ಸಂಘ, ಸಂಸ್ಥೆ ಪದಾಧಿಕಾರಿಗಳು, ಅಧಿಕಾರಿಗಳು ಹಾಗೂ ಇನ್ನಿತರರು ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T